**ಕರ್ನಾಟಕ ಸರ್ಕಾರ**

ಸಂಖ್ಯೆ: ಇಎನ್ 69 ಇಇಬಿ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:23.09.2016.

ಇಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಇಂಧನ ಇಲಾಖೆ,
ಬೆಂಗಳೂರು-1.

ಇವರಿಗೆ:

**ಮುಖ್ಯ ಜಾಗೃತ ಅಧಿಕಾರಿಗಳು**

1. ಅಪರ ಮುಖ್ಯ ವಿದ್ಯುತ್ ಪರಿವೀಕ್ಷಕರು, ಮುಖ್ಯ ವಿದ್ಯುತ್ ಪರಿವೀಕ್ಷಕರ ಕಛೇರಿ, ಬೆಂಗಳೂರು.
2. ಪ್ರಧಾನ ವ್ಯವಸ್ಥಾಪಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ವ್ಯವಸ್ಥಾಪಕ ನಿರ್ದೇಶಕರ ಕಛೇರಿ, ಬೆಂಗಳೂರು.
3. ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ವ್ಯವಸ್ಥಾಪಕ ನಿರ್ದೇಶಕರ ಕಛೇರಿ, ಬೆಂಗಳೂರು.
4. ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ), ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ವ್ಯವಸ್ಥಾಪಕ ನಿರ್ದೇಶಕರ ಕಛೇರಿ, ಬೆಂಗಳೂರು.
5. ಪ್ರಧಾನ ವ್ಯವಸ್ಥಾಪಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ವ್ಯವಸ್ಥಾಪಕ ನಿರ್ದೇಶಕರ ಕಛೇರಿ, ಬೆಂಗಳೂರು.
6. ನಿರ್ದೇಶಕರು (ತಾಂತ್ರಿಕ), ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ವ್ಯವಸ್ಥಾಪಕ ನಿರ್ದೇಶಕರ ಕಛೇರಿ, ಮಂಗಳೂರು.
7. ಪ್ರಧಾನ ವ್ಯವಸ್ಥಾಪಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ವ್ಯವಸ್ಥಾಪಕ ನಿರ್ದೇಶಕರ ಕಛೇರಿ, ಹುಬ್ಬಳ್ಳಿ.
8. ಪ್ರಧಾನ ವ್ಯವಸ್ಥಾಪಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಗುಲ್ಬರ್ಗಾ ವಿದ್ಯುತ್ ಸರಬತಾಜು ಕಂಪನಿ, ವ್ಯವಸ್ಥಾಪಕ ನಿರ್ದೇಶಕರ ಕಛೇರಿ, ಕಲಬುರಗಿ.
9. ಪ್ರಧಾನ ವ್ಯವಸ್ಥಾಪಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ವ್ಯವಸ್ಥಾಪಕ ನಿರ್ದೇಶಕರ ಕಛೇರಿ, ಮೈಸೂರು.
10. ಅಧಿಕ ನಿರ್ದೇಶಕರು (ಯೋಜನೆಗಳು), ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ವ್ಯವಸ್ಥಾಪಕ ನಿರ್ದೇಶಕರ ಕಛೇರಿ, ಬೆಂಗಳೂರು.

Corporate Office, HESCOM
Navanagar, HUBLI.

| | |
|---|---|
| F.A. | |
| G.M.(A) | |
| G.M.(T) | |
| SEE T&P | |
| SEE PMC | |
| PS to MD | |
| PS to DT | |
| TA to DT | |
| AE (C) | |
| H.C. | |
| D (T) | |

M. D. HESCOM.

**ಜಾಗೃತ ಅಧಿಕಾರಿಗಳು**

1. ಉಪ ಮುಖ್ಯ ವಿದ್ಯುತ್ ಪರಿವೀಕ್ಷಕರು, ಅಪರ ಮುಖ್ಯ ವಿದ್ಯುತ್ ಪರೀವಿಕ್ಷಕರ ಕಛೇರಿ, ಬೆಂಗಳೂರು ಉತ್ತರ / ಬೆಂಗಳೂರು ದಕ್ಷಿಣ / ಮೈಸೂರು / ಮಂಗಳೂರು / ಧಾರವಾಡ / ಕಲಬುರಗಿ.
2. ಉಪ ಪ್ರಧಾನ ಪ್ರಬಂಧಕರು (ಮಾನವ ಸಂಪನ್ಮೂಲ ಅಭಿವೃದ್ಧಿ), ಕರ್ನಾಟಕ ವಿದ್ಯುತ್ ನಿಗಮದ ಕೇಂದ್ರ ಕಛೇರಿ, ಬೆಂಗಳೂರು.
3. ಸಹಾಯಕ ಪ್ರಧಾನ ಪ್ರಬಂಧಕರು (ಮಾನವ ಸಂಪನ್ಮೂಲ ಅಭಿವೃದ್ಧಿ)-2. ಯಲಹಂಕ /ಶಿವನ ಸಮುದ್ರ ವಿದ್ಯುತ್ ಯೋಜನೆ.
4. ಸಹಾಯಕ ಪ್ರಧಾನ ಪ್ರಬಂಧಕರು (ಮಾನವ ಸಂಪನ್ಮೂಲ ಅಭಿವೃದ್ಧಿ), ಕಾಳಿ ವಿದ್ಯುತ್ ಯೋಜನೆ, ಅಂಬಿಕಾನಗರ.
5. ಉಪ ಪ್ರಧಾನ ಪ್ರಬಂಧಕರು (ಮಾನವ ಸಂಪನ್ಮೂಲ ಅಭಿವೃದ್ಧಿ), ಶರಾವತಿ ವಿದ್ಯುತ್ ಯೋಜನೆ, ಜೋಗ.
6. ಸಹಾಯಕ ಪ್ರಧಾನ ಪ್ರಬಂಧಕರು (ಮಾನವ ಸಂಪನ್ಮೂಲ ಅಭಿವೃದ್ಧಿ), ವರಾಹಿ ವಿದ್ಯುತ್ ಯೋಜನೆ, ಹೊಸಂಗಡಿ.
7. ಉಪ ಪ್ರಧಾನ ಪ್ರಬಂಧಕರು (ಮಾನವ ಸಂಪನ್ಮೂಲ ಅಭಿವೃದ್ಧಿ), ಬಳ್ಳಾರಿ ಥರ್ಮಲ್ ಪವರ ಸ್ಥಾವರ, ಕುಂತಿನಿ ಬಳ್ಳಾರಿ.
8. ಉಪ ಪ್ರಧಾನ ಪ್ರಬಂಧಕರು (ಮಾನವ ಸಂಪನ್ಮೂಲ ಅಭಿವೃದ್ಧಿ), ರಾಯಚೂರು ಥರ್ಮಲ್ ಪವರ್ ಸ್ಥಾವರ ಶಕ್ತಿನಗರ (ರಾಯಚೂರು) ಹಾಗೂ ರಾಯಚೂರು ಪವರ್ ಕಾರ್ಪೋರೇಷನ್ ಲಿ., ಯರಮರಸ (ರಾಯಚೂರು).

Corporate Office, HESCOM, Hubli.

| | |
|---|---|
| 1 | AO (Admin) |
| 2 | AO (I/m) |
| 3 | EE (IRO) |
| 4 | LAW |
| | |
| | |

9. ಲೆಕ್ಕನಿಯಂತ್ರಣಾಧಿಕಾರಿ, ಪ್ರಸರಣ ವಲಯ ಕಛೇರಿ, ಕವಿಪ್ರನಿನಿ, ಬೆಂಗಳೂರು / ಹಾಸನ / ಮೈಸೂರು / ತುಮಕೂರು / ಬಾಗಲಕೋಟೆ / ಕಲಬುರಗಿ.
10. ಉಪ ಲೆಕ್ಕನಿಯಂತ್ರಣಾಧಿಕಾರಿ, ಕಾರ್ಯ ಮತ್ತು ಪಾಲನ ವೃತ್ತ ಕಛೇರಿ, ಬೆಸ್ಕಾಂ, ಬೆಂಗಳೂರು ದಕ್ಷಿಣ/ಬೆಂಗಳೂರು ಉತ್ತರ/ ಬೆಂಗಳೂರು ಪೂರ್ವ/ ಬೆಂಗಳೂರು ಪಶ್ಚಿಮ/ ಬೆಂಗಳೂರು ಗ್ರಾಮೀಣ/ ರಾಮನಗರ/ ಕೋಲಾರ/ ತುಮಕೂರು / ದಾವಣಗೆರೆ.
11. ಮುಖ್ಯ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನ ವಲಯ ಕಛೇರಿ, ಮೆಸ್ಕಾಂ, ಮಂಗಳೂರು.
12. ಮುಖ್ಯ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನ ವಲಯ ಕಛೇರಿ, ಮೆಸ್ಕಾಂ, ಅತ್ತಾವರ /ಮಂಗಳೂರು/ ಉಡುಪಿ, ಶಿವಮೊಗ್ಗ /ಚಿಕ್ಕಮಗಳೂರು.
13. ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನ ವಿಭಾಗ ಕಛೇರಿ, ಮೆಸ್ಕಾಂ, ಮಂಗಳೂರು-1/ ಮಂಗಳೂರು-2 /ಬಂಟ್ವಾಳ / ಪುತ್ತೂರು / ಉಡುಪಿ / ಕುಂದಾಪುರ / ಶಿವಮೊಗ್ಗ / ಶಿಕಾರಿಪುರ / ಸಾಗರ / ಭದ್ರಾವತಿ / ಚಿಕ್ಕಮಗಳೂರು / ಕಡೂರು.
14. ಉಪ ಲೆಕ್ಕನಿಯಂತ್ರಣಾಧಿಕಾರಿ, ಕಾರ್ಯ ಮತ್ತು ಪಾಲನ ವೃತ್ತ ಕಛೇರಿ, ಹೆಸ್ಕಾಂ, ಹುಬ್ಬಳ್ಳಿ / ಹಾವೇರಿ / ಶಿರಸಿ / ಬೆಳಗಾವಿ / ಚಿಕ್ಕೋಡಿ / ವಿಜಯಪುರ / ಬಾಗಲಕೋಟೆ.
15. ಉಪ ಲೆಕ್ಕನಿಯಂತ್ರಣಾಧಿಕಾರಿ, ಕಾರ್ಯ ಮತ್ತು ಪಾಲನ ವೃತ್ತ ಕಛೇರಿ, ಜೆಸ್ಕಾಂ, ಕಲಬುರಗಿ / ಬೀದರ್ / ರಾಯಚೂರು / ಬಳ್ಳಾರಿ / ಕೊಪ್ಪಳ (ಮುನಿರಾಬಾದ್).
16. ಉಪ ಲೆಕ್ಕನಿಯಂತ್ರಣಾಧಿಕಾರಿ, ಕಾರ್ಯ ಮತ್ತು ಪಾಲನ ವೃತ್ತ ಕಛೇರಿ, ಸೆಸ್ಕ್, ಮೈಸೂರು / ಚಾಮರಾಜನಗರ-ಕೊಡಗು (ಮೈಸೂರು) / ಮಂಡ್ಯ / ಹಾಸನ.

ಮಾನ್ಯರೆ,

ವಿಷಯ : ಕರ್ನಾಟಕ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆ/ ನಿರ್ದೇಶನಾಲಯ ಆಯುಕ್ತಾಲಯ, ನಿಗಮ/ ಮಂಡಳಿಗಳಿಗೆ ಸಂಬಂಧಿಸಿದಂತೆ ಮುಖ್ಯ ಜಾಗೃತ ಅಧಿಕಾರಿ (Chief Vigilance Officer) ಜಾಗೃತ ಅಧಿಕಾರಿ (Vigilance Officer) ಗಳು ಅನುಸರಿಸಬೇಕಾದ ಕ್ರಮಗಳ ಕುರಿತು.

ಉಲ್ಲೇಖ : 1) ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 14 ಸೇಲೋಇಯು 2016, ದಿ:14.03.2016.
2) ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 88 ಸೇಲೋಇಯು 2016, ದಿ:22.06.2016.
3) ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 88 ಸೇಲೋಇಯು 2016 (ಭಾಗ-1) ದಿ:06.07.2016.
4) ಸರ್ಕಾರದ ಆದೇಶ ಸಂಖ್ಯೆ : ಇಎನ್ 69 ಇಇಬಿ 2016, ದಿನಾಂಕ :29.06.2016.
5) ಸರ್ಕಾರದ ಆದೇಶ ಸಂಖ್ಯೆ : ಇಎನ್ 69 ಇಇಬಿ 2016, ದಿನಾಂಕ :15.09.2016.
6) ಸಿಆಸು ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ 222 ಸೇಲೋಇಯು 2016, ದಿ:20.08.2016.
7) ಸಿಆಸು ಇಲಾಖೆಯ ಸುತ್ತೋಲೆ ಸಂಖ್ಯೆ : ಸಿಆಸುಇ 217 ಸೇಲೋಇಯು 2016, ದಿ:24.08.2016.
8) ಸಿಆಸು ಇಲಾಖೆಯ ಅ.ಟಿ. ಸಂಖ್ಯೆ : ಸಿಆಸುಇ 226 ಸೇಲೋಇಯು 2016, ದಿ:01.09.2016.
9) ಸಿಆಸು ಇಲಾಖೆಯ ಅ.ಟಿ. ಸಂಖ್ಯೆ : ಸಿಆಸುಇ 193 ಸೇಲೋಇಯು 2016, ದಿ:02.08.2016 ಮತ್ತು ನೆನಪೋಲೆ ದಿನಾಂಕ : 03.09.2016.
10) ಸಿಆಸು ಇಲಾಖೆಯ ಅ.ಟಿ. ಸಂಖ್ಯೆ : ಸಿಆಸುಇ 237 ಸೇಲೋಇಯು 2016, ದಿ:03.09.2016.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ದಿನಾಂಕ :14.03.2016 ರ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988 ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳ (Anti Corruption Bureau) ವನ್ನು ಸೃಜಿಸಲಾಗಿದೆ (ಪ್ರತಿ ಲಗತ್ತಿಸಿದೆ).

ಉಲ್ಲೇಖ (2) ರ ದಿನಾಂಕ :22.06.2016 ರ ಸರ್ಕಾರದ ಆದೇಶದಲ್ಲಿ ಪ್ರತಿಯೊಂದು ಇಲಾಖೆಗೆ ಸಂಬಂಧಿಸಿದಂತೆ ಕ್ಷೇತ್ರ ಇಲಾಖೆ ಒಳಗೊಂಡಂತೆ ಜಾಗೃತ ಕೋಶಗಳನ್ನು ಚಾಲನೆಗೊಳಿಸಿ, ಮುಖ್ಯ ಜಾಗೃತ ಅಧಿಕಾರಿ (Chief Vigilance Officer)/ ಜಾಗೃತ ಅಧಿಕಾರಿ (Vigilance Officer) ಗಳನ್ನು ನೇಮಕ ಮಾಡುವಂತೆ ಆದೇಶಿಸಲಾಗಿದೆ (ಪ್ರತಿ ಲಗತ್ತಿಸಿದೆ).

---3)

47

ಉಲ್ಲೇಖ (3) ರ ದಿನಾಂಕ : 06.07.2016 ರ ಸರ್ಕಾರದ ಆದೇಶದಲ್ಲಿ ಇಲಾಖೆಗಳಲ್ಲಿ ಸೃಜಿಸಲಾಗಿರುವ ಜಾಗೃತ ಕೋಶಗಳ ಮುಖ್ಯಸ್ಥರಾದ ಮುಖ್ಯ ಜಾಗೃತ ಅಧಿಕಾರಿ ಮತ್ತು ಜಾಗೃತ ಅಧಿಕಾರಿಗಳ ಕರ್ತವ್ಯಗಳನ್ನು ನಿರ್ದಿಷ್ಟಪಡಿಸಿ ಆದೇಶಿಸಲಾಗಿದೆ (ಪ್ರತಿ ಲಗತ್ತಿಸಿದೆ).

ಉಲ್ಲೇಖ (4) ರ ದಿನಾಂಕ :29.06.2016 ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಸರ್ಕಾರದ ಸಚಿವಾಲಯದ ಇಂಧನ ಇಲಾಖೆಗೆ ಸಂಬಂಧಿಸಿದಂತೆ ಸರ್ಕಾರದ ಉಪ ಕಾರ್ಯದರ್ಶಿ, ಇಂಧನ ಇಲಾಖೆ ಇವರನ್ನು ಮುಖ್ಯ ಜಾಗೃತ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ (ಪ್ರತಿ ಲಗತ್ತಿಸಿದೆ).

ಉಲ್ಲೇಖ (5) ರ ದಿನಾಂಕ : 15.09.2016 ರ ಸರ್ಕಾರದ ಆದೇಶಗಳಲ್ಲಿ ಇಂಧನ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಪರಿವೀಕ್ಷಣಾಲಯ / ನಿಗಮಗಳು ಕಂಪನಿಗಳು /ಮಂಡಳಿಗಳಿಗೆ ಸಂಬಂಧಿಸಿದಂತೆ ಮುಖ್ಯ ಜಾಗೃತ ಅಧಿಕಾರಿ (Chief Vigilance Officer)/ ಜಾಗೃತ ಅಧಿಕಾರಿ (Vigilance Officer) ಗಳನ್ನು ನೇಮಕ ಮಾಡಿ ಆದೇಶಿಸಲಾಗಿದೆ (ಪ್ರತಿ ಲಗತ್ತಿಸಿದೆ).

ಉಲ್ಲೇಖ (6) ರ ದಿನಾಂಕ : 20.08.2016 ರ ಸರ್ಕಾರದ ಸುತ್ತೋಲೆಯಲ್ಲಿ ಸರ್ಕಾರದ ಎಲ್ಲಾ ಕಛೇರಿಗಳ ಪ್ರವೇಶ ದ್ವಾರ ಮತ್ತು ಕಛೇರಿಗೆ ಬರುವ ಸಾರ್ವಜನಿಕರಿಗೆ ಮುಕ್ತವಾಗಿ ಕಾಣುವಂತಹಯ ತೆರೆದ ಸ್ಥಳಗಳಲ್ಲಿ ಭ್ರಷ್ಟಾಚಾರ ನಿಗ್ರಹದಳದ ಸಹಾಯವಾಣಿ ಸಂಖ್ಯೆಯನ್ನುಳ್ಳ ಫಲಕಗಳನ್ನು ಅಳವಡಿಸುವಂತೆ ಸೂಚಿಸಲಾಗಿದೆ (ಪ್ರತಿ ಲಗತ್ತಿಸಿದೆ).
ಈ ಸುತ್ತೋಲೆಯಂತೆ ಸಂಬಂಧಿಸಿದ ಮುಖ್ಯ ಜಾಗೃತ ಅಧಿಕಾರಿ ಮತ್ತು ಜಾಗೃತ ಅಧಿಕಾರಿಗಳು ಅಗತ್ಯ ಕ್ರಮವನ್ನು ಕೂಡಲೇ ವಹಿಸುವಂತೆ ಸೂಚಿಸಲಾಗಿದೆ.

ಉಲ್ಲೇಖ (7) ರ ದಿನಾಂಕ : 24.08.2016 ರ ಸರ್ಕಾರದ ಸುತ್ತೋಲೆಯಲ್ಲಿ ಸಂಬಂಧಪಟ್ಟ ಸರ್ಕಾರದ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ/ಅಧಿಕಾರಿಗಳ ವಿರುದ್ಧದ ಪ್ರಕರಣಗಳನ್ನು ಭ್ರಷ್ಟಾಚಾರ ನಿಗ್ರಹ ದಳಕ್ಕೆ ತನಿಖೆಗಾಗಿ ವಹಿಸುವ ಮುನ್ನ ತಮ್ಮ ಹಂತದಲ್ಲಿ ಆಂತರಿಕ ಪರಿಶೀಲನೆ (Internal Scrutiny) ಮಾಡಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಗಳ (Competent Authorities) ಅನುಮೋದನೆ ಪಡೆದ ನಂತರವೇ ಪ್ರಕರಣಗಳನ್ನು ಭ್ರಷ್ಟಾಚಾರ ನಿಗ್ರಹ ದಳಕ್ಕೆ ತನಿಖೆಗೆ ವಹಿಸತಕ್ಕದ್ದೆಂದು ತಿಳಿಸಲಾಗಿದೆ (ಪ್ರತಿ ಲಗತ್ತಿಸಿದೆ).

ಉಲ್ಲೇಖ (8) ರ ದಿನಾಂಕ : 01.09.2016 ರ ಸಿಆಸು ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಸಂಬಂಧಪಟ್ಟ ಇಲಾಖೆಗಳಲ್ಲಿ ಅಭಿಯೋಜನಾ ಮಂಜೂರಾತಿ ಕೋರಿ ಸಲ್ಲಿಸುವ ಪ್ರಸ್ತಾವನೆಗಳನ್ನು ನಿಗಧಿತ ಅವಧಿಯೊಳಗೆ ವಿಲೇಗೊಳಿಸುವ ಜವಾಬ್ದಾರಿಯನ್ನು ಮುಖ್ಯ ಜಾಗೃತ ಅಧಿಕಾರಿ ಜಾಗೃತ ಅಧಿಕಾರಿಗಳು ನಿರ್ವಹಿಸತಕ್ಕದ್ದೆಂದು ಸೂಚಿಸಲಾಗಿದೆ (ಪ್ರತಿ ಲಗತ್ತಿಸಿದೆ).

ಉಲ್ಲೇಖ (9) ರ ದಿನಾಂಕ :02.08.2016 ರ ಸಿಆಸು ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಸಂಬಂಧಪಟ್ಟ ಇಲಾಖೆಗಳಲ್ಲಿ ನೇಮಿಸಲಾಗಿರುವ ಮುಖ್ಯ ಜಾಗೃತ ಅಧಿಕಾರಿ / ಜಾಗೃತ ಅಧಿಕಾರಿಗಳ ಹೆಸರು, ಪದನಾಮ, ವಿಳಾಸ, ದೂರವಾಣಿ ಸಂಖ್ಯೆ, ಮೊಬೈಲ್ ಸಂಖ್ಯೆ, ಇ-ಮೇಲ್ ವಿಳಾಸ ಇತ್ಯಾದಿಗಳನ್ನು ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿ ತುರ್ತಾಗಿ ಒದಗಿಸುವಂತೆ ಕೋರಲಾಗಿದೆ (ಪ್ರತಿ ಲಗತ್ತಿಸಿದೆ). ಈ ಅ.ಟಿ.ಯಂತೆ ಸಂಬಂಧಿಸಿದ ಮುಖ್ಯ ಜಾಗೃತ ಅಧಿಕಾರಿ ಮತ್ತು ಜಾಗೃತ ಅಧಿಕಾರಿಗಳು ನಿಗಧಿತ ನಮೂನೆಯಲ್ಲಿ ವಿವರಗಳನ್ನು ಕೂಡಲೇ ಸರ್ಕಾರಕ್ಕೆ ಕಳುಹಿಸುವಂತೆ ಕೋರಲಾಗಿದೆ.

ಉಲ್ಲೇಖ (10) ರ ದಿನಾಂಕ :03.09.2016 ರ ಸಿಆಸು ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಸಂಬಂಧಪಟ್ಟ ಇಲಾಖೆಗಳಲ್ಲಿ ನೇಮಿಸಲಾಗಿರುವ ಮುಖ್ಯ ಜಾಗೃತ ಅಧಿಕಾರಿ / ಜಾಗೃತ ಅಧಿಕಾರಿಗಳ ತಮ್ಮ ಅಧೀನ ಕಛೇರಿಗಳಿಂದ ದೂರುಗಳು / ಜಾಗೃತ ಪ್ರಕರಣಗಳ ವಿಲೇ ಹಾಗೂ ಬಾಕಿ ಪ್ರಕರಣಗಳ ಅಂಕಿ ಅಂಶಗಳ ವರದಿಯನ್ನು ನಿಗಧಿತ ನಮೂನೆಯಲ್ಲಿ ಪ್ರಾರಂಭಿಕವಾಗಿ ದಿನಾಂಕ :31.08.2016 ರ ಅಂತ್ಯಕ್ಕೆ ಇರುವಂತೆ ವರದಿಯನ್ನು ಕೂಡಲೇ ಕಳುಹಿಸುವಂತೆ ಕೋರಲಾಗಿದೆ (ಪ್ರತಿ ಲಗತ್ತಿಸಿದೆ). ಈ ಅ.ಟಿ.ಯಂತೆ ಸಂಬಂಧಿಸಿದ ಮುಖ್ಯ ಜಾಗೃತ ಅಧಿಕಾರಿ ಮತ್ತು ಜಾಗೃತ ಅಧಿಕಾರಿಗಳು ನಿಗಧಿತ ನಮೂನೆಯಲ್ಲಿ ವಿವರಗಳನ್ನು ಕೂಡಲೇ ಸರ್ಕಾರಕ್ಕೆ ಕಳುಹಿಸುವಂತೆ ಕೋರಲಾಗಿದೆ.

ಈ ಮೇಲೆ ವಿವರಿಸಿರುವಂತೆ ನಿಗಧಿತ ನಮೂನೆಯ ವರದಿಯನ್ನು ಕೂಡಲೇ ಸರ್ಕಾರಕ್ಕೆ ಕಳುಹಿಸುವಂತೆ ಹಾಗೂ ವರದಿ ಸಿದ್ಧವಾದ ಕೂಡಲೇ ಇ-ಮೇಲ್ ವಿಳಾಸ dsenergy123@gmail.com ಗೆ ಕಳುಹಿಸುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿರುತ್ತೇನೆ.

(ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಂದ
ಅನುಮೋದಿತ).

ತಮ್ಮ ವಿಶ್ವಾಸಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

23.09

ಪ್ರತಿ ಮಾಹಿತಿಗಾಗಿ :

ಸರ್ಕಾರದ ಉಪ ಕಾರ್ಯದರ್ಶಿ, ಸಿಆಸು ಇಲಾಖೆ ಜಾಗೃತ ವಿಭಾಗ, ಕೊಠಡಿ ಸಂಖ್ಯೆ 114, ವಿಕಾಸ ಸೌಧ, ಬೆಂಗಳೂರು.

ಮೆಮೋ ಸಂಖ್ಯೆ: ಹುವಿಸಕಂನಿ/ಪ್ರ.ವ್ಯ(ಆ)/ಲೆ(ಆ)/ಸಲೆ(ಆ)/ಆ-2/ಕಾರಕ-893[14863]/2016-17/CYS-2623 ದಿನಾಂಕ: 26 OCT 2016

ಪ್ರತಿ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ;

1. ಮುಖ್ಯ ಇಂಜಿನಿಯರ್[ವಿ], ಹುಬ್ಬಳ್ಳಿ/ ಬೆಳಗಾವಿ ವಲಯ, ಹುವಿಸಕಂನಿ, ಹುಬ್ಬಳ್ಳಿ/ ಬೆಳಗಾವಿ.
2. ಆರ್ಥಿಕ ಸಲಹೆಗಾರರು[ಆಂ.ಪ], ಕಂಪನಿ ಕಾರ್ಯಾಲಯ, ಹುವಿಸಕಂನಿ, ಹುಬ್ಬಳ್ಳಿ.
3. ಪ್ರಧಾನ ವ್ಯವಸ್ಥಾಪಕರು[ತಾಂತ್ರಿಕ], ಕಂಪನಿ ಕಾರ್ಯಾಲಯ, ಹುವಿಸಕಂನಿ, ಹುಬ್ಬಳ್ಳಿ.
4. ಅಧೀಕ್ಷಕ ಇಂಜಿನಿಯರ್(ವಿ)[ಟಿ & ಪಿ. / ಪಿ.ಎಮ್.ಸಿ], ಕಂಪನಿ ಕಾರ್ಯಾಲಯ, ಹುವಿಸಕಂನಿ., ಹುಬ್ಬಳ್ಳಿ.
5. ಅಧೀಕ್ಷಕ ಇಂಜಿನಿಯರ್(ವಿ)[ಮಾ.ತಂ], ಕಂಪನಿ ಕಾರ್ಯಾಲಯ, ಹುವಿಸಕಂನಿ., ಹುಬ್ಬಳ್ಳಿ. ರವರ ಮಾಹಿತಿಗಾಗಿ ಹಾಗೂ ಹುವಿಸಕಂನಿ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಸೂಚಿಸಿದೆ.
6. ಎಲ್ಲಾ ಅಧೀಕ್ಷಕ ಇಂಜಿನೀಯರ್(ವಿ) ಕಾರ್ಯ ಮತ್ತು ಪಾಲನೆ ವೃತ್ತ, ಹುವಿಸಕಂನಿ,________.
7. ಎಲ್ಲಾ ನಿಯಂತ್ರಣಾಧಿಕಾರಿಗಳು, ಹುವಿಸಕಂನಿ, __________.
8. ಎಲ್ಲಾ ಕಾರ್ಯನಿರ್ವಾಹಕ ಇಂಜಿನೀಯರ್(ವಿ)/ ಉಪ ಲೆಕ್ಕನಿಯಂತ್ರಣಾಧಿಕಾರಿ, ಹುವಿಸಕಂನಿ,_________.
9. ಎಲ್ಲಾ ಲೆಕ್ಕಾಧಿಕಾರಿಗಳು[ಆಂ.ಪ], ಹುವಿಸಕಂನಿ, ಹುಬ್ಬಳ್ಳಿ.
10. ಆಪ್ತ ಕಾರ್ಯದರ್ಶಿ[ವ್ಯ.ನಿ], ಕಂಪನಿ ಕಾರ್ಯಾಲಯ, ಹುವಿಸಕಂನಿ, ಹುಬ್ಬಳ್ಳಿ - ರವರ ಮಾಹಿತಿಗಾಗಿ ಹಾಗೂ ಸದರಿ ವಿಷಯವನ್ನು ಮಾನ್ಯರ ಗಮನಕ್ಕೆ ತರುವಂತೆ ಕೋರಲಾಗಿದೆ.
11. ಆಪ್ತ ಕಾರ್ಯದರ್ಶಿಗಳು[ನಿರ್ದೇಶಕರು[ತಾಂತ್ರಿಕ]/ ಮುಖ್ಯ ಆರ್ಥಿಕ ಅಧಿಕಾರಿ], ಕಂಪನಿ ಕಾರ್ಯಾಲಯ, ಹುವಿಸಕಂನಿ, ಹುಬ್ಬಳ್ಳಿ.

ಪ್ರಧಾನ ವ್ಯವಸ್ಥಾಪಕರು
[ಆಡಳಿತ ಮತ್ತು ಮಾ.ಸಂ.ಅ]

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ


| ಭಾಗ–I | ಬೆಂಗಳೂರು, ಮಂಗಳವಾರ, ಮಾರ್ಚ್ ೧೫, ೨೦೧೬ (ಫಾಲ್ಗುಣ ೨೫, ಶಕ ವರ್ಷ ೧೯೩೭) | ನಂ. ೩೭೫ |
|---|---|---|
| Part–I | Bengaluru, Tuesday, March 15, 2016 (Palguna 25, Shaka Varsha 1937) | No. 375 |


### ಕರ್ನಾಟಕ ಸರ್ಕಾರದ ನಡವಳಿಗಳು

### ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ:– ರಾಜ್ಯದಲ್ಲಿ ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳ (Anti-Corruption Bureau), ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಜಾಗೃತ ಕೋಶ (Vigilance Cells) ಹಾಗೂ ಜಾಗೃತ ವ್ಯವಸ್ಥೆಯ ಮೇಲುಸ್ತುವಾರಿಗೆ ಜಾಗೃತ ಸಲಹಾ ಮಂಡಳಿಯನ್ನು (Vigilance Advisory Board) ಸೃಜಿಸುವ ಕುರಿತು.

ಓದಲಾಗಿದೆ :–

1. ಅಧಿಸೂಚನೆ ಸಂಖ್ಯೆ:ಹೆಚ್‌ಡಿ 286 ಪಿಇಜಿ 90, ದಿನಾಂಕ: 06.02.1991.
2. ಅಧಿಸೂಚನೆ ಸಂಖ್ಯೆ:ಹೆಚ್‌ಡಿ 292 ಪಿಇಜಿ 2000, ದಿನಾಂಕ: 08.05.2002.
3. ಅಧಿಸೂಚನೆ ಸಂಖ್ಯೆ:ಹೆಚ್‌ಡಿ 334 ಪಿಇಜಿ 2002, ದಿನಾಂಕ: 05.12.2002.
4. ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಬೆಂಗಳೂರು, ಇವರ ಪತ್ರ ಸಂಖ್ಯೆ:ಆರ್.ಎಲ್.ಎನ್.(1)87/2015–16, ದಿನಾಂಕ:03.02.2016.

ಪ್ರಸ್ತಾವನೆ:

ಆಡಳಿತ-ನಿರ್ವಹಣೆಯಲ್ಲಿ ನಡೆದ ಭ್ರಷ್ಟಾಚಾರ, ಸ್ವಜನ ಪಕ್ಷಪಾತ ಮತ್ತು ಅಶಿಸ್ತಿನ ಪ್ರಕರಣಗಳೂ ಸೇರಿದಂತೆ, ಆಡಳಿತ ಕ್ರಮಗಳಲ್ಲಿ ಬಂದ ಫಿರ್ಯಾದುಗಳ ಬಗ್ಗೆ ವಿಚಾರಣೆ ನಡೆಸುವ ಮೂಲಕ, ಸಾರ್ವಜನಿಕ ಆಡಳಿತ ಗುಣಮಟ್ಟವನ್ನು ಸುಧಾರಿಸುವ ಸಲುವಾಗಿ ಕರ್ನಾಟಕ ಲೋಕಾಯುಕ್ತ ಅಧಿನಿಯಮ, 1984ನ್ನು ಜಾರಿಗೆ ತರಲಾಗಿದೆ. ಕರ್ನಾಟಕ ಲೋಕಾಯುಕ್ತ ಸಂಸ್ಥೆಯು ಆಡಳಿತ, ವಿಚಾರಣೆ, ತಾಂತ್ರಿಕ ಮತ್ತು ಪೊಲೀಸ್ ವಿಭಾಗಗಳನ್ನು ಒಳಗೊಂಡಿದೆ.

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಅಧಿಸೂಚನೆಯನ್ವಯ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಸಲುವಾಗಿ ಸದರಿ ಅಧಿನಿಯಮದ ಪ್ರಕರಣ 17ರನ್ವಯ ತನಿಖೆ ನಡೆಸುವ ಅಧಿಕಾರವನ್ನು ಕರ್ನಾಟಕ ಲೋಕಾಯುಕ್ತದಲ್ಲಿನ ಎಲ್ಲಾ ಪೊಲೀಸ್ ಇನ್ಸ್‌ಪೆಕ್ಟರ್‌ಗಳಿಗೆ ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (2) ಮತ್ತು (3)ರಲ್ಲಿ ಓದಲಾದ ಅಧಿಸೂಚನೆಗಳನ್ವಯ ಕರ್ನಾಟಕ ಲೋಕಾಯುಕ್ತದಲ್ಲಿನ ಪೊಲೀಸ್ ಇನ್ಸ್‌ಪೆಕ್ಟರ್‌ಗಳ ಕಚೇರಿಗಳನ್ನು ದಂಡ ಪ್ರಕ್ರಿಯಾ ಸಂಹಿತೆಯ ಪ್ರಕರಣ (2)ರಡಿ ಪೊಲೀಸ್ ಠಾಣೆಗಳೆಂದು ಘೋಷಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಪತ್ರದಲ್ಲಿ ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್‌ರವರು (ಡಿ.ಜಿ.&ಐ.ಜಿ.ಪಿ), ಶ್ರೀ ಸಿ.ರಂಗಸ್ವಾಮಯ್ಯ ವಿರುದ್ಧ ಕರ್ನಾಟಕ ಲೋಕಾಯುಕ್ತ (1998)6 SCC 66) ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯದ ತೀರ್ಪಿನ ಹಿನ್ನೆಲೆಯಲ್ಲಿ, ಭ್ರಷ್ಟಾಚಾರ ತಡೆ ಅಧಿನಿಯಮ, 1988ರ ಜಾರಿಗೆ ಸಂಬಂಧಿಸಿದಂತೆ ಕೆಲವು ಮಾರ್ಪಾಡುಗಳನ್ನು ಮಾಡುವ ಅವಶ್ಯಕತೆ ಇದ್ದು, ರಾಜ್ಯದಲ್ಲಿ ಒಂದು ಭ್ರಷ್ಟಾಚಾರ ನಿಗ್ರಹ ದಳವನ್ನು (Anti-Corruption Bureau) (ACB) ಸೃಜಿಸುವ ಬಗ್ಗೆ ಪ್ರಸ್ತಾಪಿಸಿದ್ದಾರೆ. ಡಿ.ಜಿ.&ಐ.ಜಿ.ಪಿ.ರವರು ಪ್ರಸ್ತುತ ಕರ್ನಾಟಕ ಲೋಕಾಯುಕ್ತದ ಪೊಲೀಸ್ ವಿಭಾಗದ ಅಧಿಕಾರಿಗಳ ಕರ್ತವ್ಯಗಳನ್ನು ಕೆಳಕಂಡ ಎರಡು ರೀತಿಯಲ್ಲಿ

1) ಪೊಲೀಸ್ ವಿಭಾಗವನ್ನು ಕರ್ನಾಟಕ ಲೋಕಾಯುಕ್ತ ಅಧಿನಿಯಮ, 1984ರ ಪ್ರಕರಣ 15(1)ರ ಪ್ರಕಾರ ಪ್ರಾಥಮಿಕವಾಗಿ ಲೋಕಾಯುಕ್ತರಿಗೆ ಲೋಕಾಯುಕ್ತ ಕಾಯ್ದೆಯನ್ನು ಜಾರಿ ಮಾಡುವಲ್ಲಿ ನೆರವಾಗುವುದು;

2) ಕರ್ನಾಟಕ ಸರ್ಕಾರವು ಹಲವಾರು ಆದೇಶಗಳಿಂದ ಲೋಕಾಯುಕ್ತದಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್‌ಗಳ ಕಾರ್ಯಾಲಯಗಳನ್ನು ಪೊಲೀಸ್ ಠಾಣೆಗಳೆಂದು ಘೋಷಿಸಿದ್ದು, ಪೊಲೀಸ್ ಅಧಿಕಾರಿಗಳು ಭ್ರಷ್ಟಾಚಾರ ತಡೆ ಅಧಿನಿಯಮ, 1988ರಡಿ ದಾಖಲಾದ ಪ್ರಕರಣಗಳನ್ನು ತನಿಖೆ ಮಾಡುವುದು. ಈ ಪ್ರಕರಣಗಳ ತನಿಖೆಯು ಲೋಕಾಯುಕ್ತರ ವ್ಯಾಪ್ತಿಯಿಂದ ಹೊರತಾಗಿದ್ದು, ಈ ಬಗ್ಗೆ ಸರ್ಕಾರವು ಕೆಲವೊಂದು ಆದೇಶಗಳನ್ನು ಹೊರಡಿಸಿರುತ್ತದೆ.

ಪೊಲೀಸ್ ಅಧಿಕಾರಿಗಳ ಈ ದ್ವಿಮುಖ ಕರ್ತವ್ಯಗಳಿಂದಾಗಿ ಅಧಿಕಾರಗಳು ಒಂದನ್ನೊಂದು ಅತಿಕ್ರಮಿಸುತ್ತಿದ್ದು (overlap), ಕೆಲವು ಗೊಂದಲಗಳು ಏರ್ಪಟ್ಟಿವೆ. ಪೊಲೀಸ್ ವಿಭಾಗದ ಅಧಿಕಾರಿಗಳು ತನಿಖೆ ನಡೆಸುವ ಭ್ರಷ್ಟಾಚಾರ ನಿರ್ಮೂಲನಾ ಕಾಯ್ದೆಯ ಪ್ರಕರಣಗಳನ್ನು ಮೇಲುಸ್ತುವಾರಿ ಮಾಡುವ ಪ್ರಕ್ರಿಯೆಗೆ ಯಾವುದೇ ಅನುಮೋದಿಸಲ್ಪಟ್ಟ ವ್ಯವಸ್ಥೆ ಇರುವುದಿಲ್ಲ. ಪ್ರಸ್ತುತ, ಭ್ರಷ್ಟಾಚಾರ ನಿರ್ಮೂಲನಾ ಕಾಯ್ದೆಯಡಿ ತನಿಖೆ ಮಾಡುವ ಪೊಲೀಸ್ ಅಧಿಕಾರಿಗಳ ಮೇಲೆ ಆಡಳಿತಾತ್ಮಕ ಹಾಗೂ ಶಿಸ್ತಿನ ಕ್ರಮ ತೆಗೆದುಕೊಳ್ಳುವ ಅಧಿಕಾರವು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಪ್ರಕರಣ 15(1) ಸಹವಾಚನ 15(4)ರಲ್ಲಿ ಲೋಕಾಯುಕ್ತರಿಗೆ ಇದ್ದು, ಇದು ಪೊಲೀಸ್ ಕಾಯ್ದೆಯ ಅಧ್ಯಾಯ 2ರ ಕಲಂ 3ಕ್ಕೆ ತದ್ವಿರುದ್ಧವಾಗುವುದರಿಂದ, ಈ ದ್ವಿಮುಖ ಕರ್ತವ್ಯಗಳ ಹೊಣೆಯನ್ನು ಕೊನೆಗೊಳಿಸುವುದು ಅವಶ್ಯಕವೆಂದೂ; ಈ ಹಿಂದೆ ಲೋಕಾಯುಕ್ತದಲ್ಲಿನ ಎಲ್ಲಾ ಪೊಲೀಸ್ ಇನ್ಸ್‌ಪೆಕ್ಟರ್‌ಗಳಿಗೆ ತನಿಖೆ ನಡೆಸಲು ಅಧಿಕಾರವನ್ನು ನೀಡಿರುವ ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್‌ಗಳ ಕಚೇರಿಗಳನ್ನು ಪೊಲೀಸ್ ಠಾಣೆಗಳೆಂದು ಘೋಷಿಸಿರುವ ಅಧಿಸೂಚನೆಗಳನ್ನು ಹಿಂಪಡೆದು ಹೊಸ ಅಧಿಸೂಚನೆಗಳನ್ನು ಹೊರಡಿಸಬೇಕೆಂದೂ ಶಿಫಾರಸ್ಸು ಮಾಡಿರುತ್ತಾರೆ. ಹಾಗೂ ಕರ್ನಾಟಕ ಲೋಕಾಯುಕ್ತದಲ್ಲಿ ಪ್ರಸ್ತುತ ಇರುವ ಪೊಲೀಸ್ ವಿಭಾಗವು ಕೇವಲ ಲೋಕಾಯುಕ್ತರಿಗೆ ಲೋಕಾಯುಕ್ತ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿ ಮಾಡಲು ನೆರವು ನೀಡಲು ಸೀಮಿತವಾಗಲು ಪ್ರಸ್ತಾಪಿಸಿದ್ದಾರೆ. ಅದರಂತೆ, ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಜಾರಿಗೊಳಿಸಲು ಹಾಗೂ ಪ್ರಕರಣಗಳನ್ನು ಸ್ವತಂತ್ರವಾಗಿ ತನಿಖೆಯನ್ನು ಮಾಡಲು **'Anti Corruption Bureau'** (ACB)ಯನ್ನು ರಚಿಸುವಂತೆ ಮತ್ತು ಈ ಘಟಕದಡಿಯಲ್ಲಿ ಪೊಲೀಸ್ ಮುಖ್ಯಸ್ಥರು ಹಾಗೂ ಸರ್ಕಾರವು ವಹಿಸುವ ಪ್ರಕರಣಗಳನ್ನು ಸ್ವತಂತ್ರವಾಗಿ ತನಿಖೆ ಮಾಡಲು ಅಧಿಕಾರ ನೀಡಬೇಕೆಂದು ಸರ್ಕಾರವನ್ನು ಕೋರಿದ್ದಾರೆ.

ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್‌ರವರ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದೆ. ಕರ್ನಾಟಕ ಲೋಕಾಯುಕ್ತದ ಪೊಲೀಸ್ ವಿಭಾಗದ ತನಿಖೆ ನಡೆಸುವ ಸ್ವತಂತ್ರ ರೂಪದ ಅಧಿಕಾರ ಕುರಿತಂತೆ ಮಾನ್ಯ ಸರ್ವೋಚ್ಛ ನ್ಯಾಯಾಲಯವು ಶ್ರೀ ಸಿ.ರಂಗಸ್ವಾಮಯ್ಯ ವಿರುದ್ಧ ಕರ್ನಾಟಕ ಲೋಕಾಯುಕ್ತ ಪ್ರಕರಣದಲ್ಲಿ (1998)6 SCC 66) ಪ್ರಚುರಪಡಿಸಿರುವ ಕಾನೂನು; ಕರ್ನಾಟಕ ಉಚ್ಛ ನ್ಯಾಯಾಲಯದ ವಿಭಾಗೀಯ ಪೀಠವು ಮುಖ್ಯ ಕಾರ್ಯದರ್ಶಿ ಮತ್ತು ಇತರರು ವಿರುದ್ಧ ಬಸವರಾಜ ಗುಡ್ಡಪ್ಪ ಮಳಿಗೇರ ಪ್ರಕರಣ ಹಾಗೂ ಇತರ ಪ್ರಕರಣಗಳಲ್ಲಿ ನೀಡಿರುವ ತೀರ್ಪುಗಳನ್ವಯ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ.

ಪ್ರಸ್ತುತ, ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯವು ಕ್ರಿಮಿನಲ್ ಅರ್ಜಿ ಸಂಖ್ಯೆ:5378/2014, 5839/2014 ಮತ್ತು 4230/2015 ಪ್ರಕರಣಗಳನ್ನು ಒಗ್ಗೂಡಿಸಿದಂತೆ ಕ್ರಿಮಿನಲ್ ಅರ್ಜಿ ಸಂಖ್ಯೆ:2653/2015, ಡಾ:ವಿ.ಎಲ್. ನಂದೀಶ್ ಮತ್ತು ಇತರರು ವಿರುದ್ಧ ರಾಜ್ಯ ಸರ್ಕಾರ ಮತ್ತು ಇತರರು ಪ್ರಕರಣಗಳನ್ನು ಪರಿಶೀಲಿಸುತ್ತಿದ್ದು, ದಿ:08.02.2016ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದ ಪ್ರತಿಯೊಂದು ಇಲಾಖೆಯಲ್ಲಿ ಜಾಗೃತ ಕೋಶವನ್ನು ಸ್ಥಾಪಿಸುವ ಅಗತ್ಯವಿದ್ದು, ಇದು ಲೋಕಾಯುಕ್ತ ಪೊಲೀಸರ ಹೊರೆಯನ್ನು ಕಡಿಮೆ ಮಾಡುವುದಲ್ಲದೇ, ಸರ್ಕಾರದ ವಿವಿಧ ಇಲಾಖೆಗಳ ಪ್ರತಿಯೊಂದು ಹಂತದಲ್ಲಿ ಭ್ರಷ್ಟಾಚಾರದ ವಿರುದ್ಧ ಕಾರ್ಯನಿರ್ವಹಿಸಲು ಇಲಾಖೆಯನ್ನು ಹುರಿದುಂಬಿಸಲಿದ್ದು, ಕೇಂದ್ರ ಸರ್ಕಾರವು ಅಳವಡಿಸಿಕೊಂಡಿರುವ ಮಾದರಿಯಲ್ಲಿ ಪ್ರತಿ ಇಲಾಖೆಯಲ್ಲಿ ಜಾಗೃತ ಕೋಶಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರವು ಪರಿಶೀಲಿಸಬೇಕೆಂದು ಹೇಳಿದೆ.

ಈ ಹಿನ್ನೆಲೆಯಲ್ಲಿ, ಆಡಳಿತಯಂತ್ರದ ಅನುಚಿತ ಕಾರ್ಯನಿರ್ವಹಣೆಯನ್ನು ತಡೆಗಟ್ಟಿ, ಆಡಳಿತದ ಗುಣಮಟ್ಟವನ್ನು ಉತ್ತಮಪಡಿಸುವ ದೃಷ್ಟಿಯಿಂದ ರಾಜ್ಯದಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಜೊತೆಗೆ ಹೆಚ್ಚುವರಿಯಾಗಿ ಬಲಿಷ್ಠ ಮತ್ತು ಪರಿಣಾಮಕಾರಿ ಜಾಗೃತ ವ್ಯವಸ್ಥೆಯನ್ನು ಹೊಂದುವ ಅವಶ್ಯಕತೆಯನ್ನು ಸರ್ಕಾರವು ಮನಗಂಡಿದೆ. ಅದರಂತೆ, ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಅನುಷ್ಠಾನಗೊಳಿಸುವ ಹೆಚ್ಚುವರಿ ಜವಾಬ್ದಾರಿಯಿಂದ ಕರ್ನಾಟಕ ಲೋಕಾಯುಕ್ತದ ಪೊಲೀಸ್ ವಿಭಾಗವನ್ನು ವಿಮುಕ್ತಿಗೊಳಿಸಲು ತೀರ್ಮಾನಿಸಲಾಗಿದೆ. ಹಾಗೂ ಕರ್ನಾಟಕ ಲೋಕಾಯುಕ್ತ ಅಧಿನಿಯಮ, 1984ರಡಿ ಸ್ವತಂತ್ರವಾಗಿ ಮತ್ತು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಲೋಕಾಯುಕ್ತರೊಂದಿಗೆ ಭ್ರಷ್ಟಾಚಾರ ತಡೆ ಅಧಿನಿಯಮವನ್ನು ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ 'ಭ್ರಷ್ಟಾಚಾರ ನಿಗ್ರಹ ದಳ'ವನ್ನು (Anti Corruption Bureau); ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಜಾಗೃತ ಕೋಶಗಳನ್ನು

(Vigilance Cells); ಹಾಗೂ ಜಾಗ್ರತ ವ್ಯವಸ್ಥೆಯ ಮೇಲುಸ್ತುವಾರಿಗೆ ಜಾಗ್ರತ ಸಲಹಾ ಮಂಡಳಿಯನ್ನು (Vigilance Advisory Board) ಸೃಜಿಸಲು ಸರ್ಕಾರವು ತೀರ್ಮಾನಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 14 ಸೇಬೋಯ 2016, ಬೆಂಗಳೂರು, ದಿನಾಂಕ: 14.03.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಪ್ರಕರಣಗಳನ್ನು ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ 'ಭ್ರಷ್ಟಾಚಾರ ನಿಗ್ರಹ ದಳ'ವನ್ನು (Anti Corruption Bureau) ಈ ಕೆಳಕಂಡ ಹುದ್ದೆಗಳೊಂದಿಗೆ ಸೃಜಿಸಲಾಗಿದೆ:-

| ಕ್ರಮ ಸಂಖ್ಯೆ | ಹುದ್ದೆಗಳ ಪದನಾಮ | ಹುದ್ದೆಗಳ ಸಂಖ್ಯೆ |
|---|---|---|
| 1. | ಅಪರ ಪೊಲೀಸ್ ಮಹಾನಿರ್ದೇಶಕರು (ADGP) | 01 |
| 2. | ಪೊಲೀಸ್ ಮಹಾನಿರೀಕ್ಷಕರು (IGP) | 01 |
| 3. | ಪೊಲೀಸ್ ಅಧೀಕ್ಷಕರು (SP) | 10 |
| 4. | ಪೊಲೀಸ್ ಉಪಾಧೀಕ್ಷಕರು (DySP) | 35 |
| 5. | ಪೊಲೀಸ್ ನಿರೀಕ್ಷಕರು (PI) | 75 |
| 6. | ಹೆಡ್ ಕಾನ್ಸ್‌ಟೇಬಲ್/ಪೊಲೀಸ್ ಕಾನ್ಸ್‌ಟೇಬಲ್ (HC/PC) | 200 |
| | ಒಟ್ಟು | 322 |

2. 'ಭ್ರಷ್ಟಾಚಾರ ನಿಗ್ರಹ ದಳ'ವು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಒಟ್ಟಾರೆ ಮೇಲ್ವಿಚಾರಣೆಯಡಿ ಕಾರ್ಯನಿರ್ವಹಿಸುವುದು. ಭ್ರಷ್ಟಾಚಾರ ನಿಗ್ರಹ ದಳಕ್ಕೆ ಅವಶ್ಯಕ ಆಡಳಿತಾತ್ಮಕ ಬೆಂಬಲ ನೀಡುವ ಸಲುವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ಸರ್ಕಾರದ ಕಾರ್ಯದರ್ಶಿ ದರ್ಜೆಯ ಒಂದು ಹುದ್ದೆಯನ್ನು ಸೃಜಿಸಿ, ಅವರ ನೇತೃತ್ವದಲ್ಲಿ ಒಂದು 'ಜಾಗೃತ ವಿಭಾಗ'ವನ್ನು (Vigilance Wing) ರಚಿಸಲಾಗಿದೆ. ಸಿ.ಆ.ಸು.ಇಲಾಖೆಯ ಜಾಗೃತ ವಿಭಾಗದ ಕಾರ್ಯದರ್ಶಿಯವರು ಮುಖ್ಯ ಕಾರ್ಯದರ್ಶಿಯವರ ಮುಖೇನ ಮಾನ್ಯ ಮುಖ್ಯ ಮಂತ್ರಿಯವರಿಗೆ ವರದಿ ಮಾಡುವುದು.

3. ರಾಜ್ಯದಲ್ಲಿನ ಭ್ರಷ್ಟಾಚಾರ ನಿಗ್ರಹ ದಳದ ಕಛೇರಿಗಳನ್ನು ದಂಡ ಪ್ರಕ್ರಿಯಾ ಸಂಹಿತೆ, 1973ರ ಪ್ರಕರಣ 2ರಡಿ ಪೊಲೀಸ್ ಠಾಣೆಗಳೆಂದು ಘೋಷಿಸಲು ಮತ್ತು ಭ್ರಷ್ಟಾಚಾರ ತಡೆ ಅಧಿನಿಯಮ, 1988ರ ~~ಪ್ರಕರಣ 17ರಡಿ ತನಿಖೆ ನಡೆಸಲು~~ ಪೊಲೀಸ್ ಉಪಾಧೀಕ್ಷಕರ (DySP) ದರ್ಜೆಗಿಂತ ಕಡಿಮೆಯಿಲ್ಲದ ಪೊಲೀಸ್ ಅಧಿಕಾರಿಗಳಿಗೆ ಅಧಿಕಾರ ನೀಡಲು ಪ್ರತ್ಯೇಕ ಅಧಿಸೂಚನೆಗಳನ್ನು ಹೊರಡಿಸಲಾಗುವುದು.

4. ಸಮವರ್ತಿಯಾಗಿ ಕರ್ನಾಟಕ ಲೋಕಾಯುಕ್ತದ ಪೊಲೀಸ್ ವಿಭಾಗಕ್ಕೆ ಭ್ರಷ್ಟಾಚಾರ ತಡೆ ಅಧಿನಿಯಮದಡಿ ತನಿಖೆ ನಡೆಸಲು ನೀಡಿರುವ ಅಧಿಕಾರವನ್ನು ಮತ್ತು ದಂಡ ಪ್ರಕ್ರಿಯಾ ಸಂಹಿತೆಯಡಿ ಕರ್ನಾಟಕ ಲೋಕಾಯುಕ್ತದ ಪೊಲೀಸ್ ವಿಭಾಗವನ್ನು ಪೊಲೀಸ್ ಠಾಣೆಗಳೆಂದು ಘೋಷಿಸಿರುವ ಅಧಿಸೂಚನೆಗಳನ್ನು ಹಿಂಪಡೆಯಲು ಪ್ರತ್ಯೇಕವಾಗಿ ಅಧಿಸೂಚನೆಗಳನ್ನು ಹೊರಡಿಸಲಾಗುವುದು.

5. ಸಾರ್ವಜನಿಕ ನೌಕರನು ತನ್ನ ಅಧಿಕೃತ ಕಾರ್ಯನಿರ್ವಹಣೆಯಲ್ಲಿ ಕೈಗೊಳ್ಳುವ ನಿರ್ಧಾರ ಅಥವಾ ಮಾಡುವ ಶಿಫಾರಸ್ಸುಗಳ ವಿರುದ್ಧ ಭ್ರಷ್ಟಾಚಾರ ನಿಗ್ರಹ ದಳವು ನೇಮಕಾತಿ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ತನಿಖೆ ಪ್ರಾರಂಭಿಸಲು ಅವಕಾಶವಿರುವುದಿಲ್ಲ.

6. ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ರಡಿ ತನಿಖೆ ಮತ್ತು ಅಭಿಯೋಜನೆಗಾಗಿ ಬಾಕಿ ಇರುವ ಪ್ರಕರಣಗಳನ್ನು ಹೊಸದಾಗಿ ಸೃಜಿಸಿರುವ ಭ್ರಷ್ಟಾಚಾರ ನಿಗ್ರಹ ದಳಕ್ಕೆ ವರ್ಗಾಯಿಸುವುದು; ಮತ್ತು ಈ ವರ್ಗಾವಣೆಯನ್ನು ದಂಡ ಪ್ರಕ್ರಿಯಾ ಸಂಹಿತೆ ಮತ್ತು ಭ್ರಷ್ಟಾಚಾರ ತಡೆ ಅಧಿನಿಯಮದಡಿ ಸುಸಂಬದ್ಧ ಅಧಿಸೂಚನೆಗಳನ್ನು ಹೊರಡಿಸಿದ ನಂತರ ವ್ಯವಸ್ಥಿತವಾಗಿ ಮಾಡುವುದು.

7. ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜನಿಯರಿಂಗ್ ಇಲಾಖೆಗಳನ್ನೊಳಗೊಂಡಂತೆ ನಿರ್ದೇಶನಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ತಮ್ಮ ಇಲಾಖೆ/ಸಂಸ್ಥೆಗಳಲ್ಲಿ ಒಂದು ಜಾಗೃತ ಕೋಶವನ್ನು ಸೃಜಿಸುವಂತೆ ಆದೇಶಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಜಾಗೃತ ವಿಭಾಗವು ಈ ಜಾಗೃತ ಕೋಶಗಳ ಕಾರ್ಯನಿರ್ವಹಣೆಯ ಮೇಲ್ವಿಚಾರಣೆಯನ್ನು ಮಾಡುವುದು ಮತ್ತು ಮುಖ್ಯಮಂತ್ರಿಯವರ ಅನುಮೋದನೆಯೊಂದಿಗೆ ಪ್ರತ್ಯೇಕವಾಗಿ ಹೊರಡಿಸಲಾಗುವ ವಿವರವಾದ ಸೂಚನೆಗಳಡಿಯಲ್ಲಿ ಜಾಗೃತ ಕಾರ್ಯವನ್ನು ಕೈಗೊಳ್ಳುವುದು.

8. ಭ್ರಷ್ಟಾಚಾರ ನಿಗ್ರಹ ದಳವು ಪೊಲೀಸ್ ಮಹಾನಿರೀಕ್ಷಕರ (IGP) ದರ್ಜೆಗಿಂತ ಕಡಿಮೆಯಿಲ್ಲದ ಅಧಿಕಾರಿಯವರ ನೇತೃತ್ವದಲ್ಲಿ ಆಂತರಿಕ ಜಾಗೃತ ವಿಭಾಗವನ್ನು ಹೊಂದುವುದು ಮತ್ತು ಇವರು ನೇರವಾಗಿ ಅಪರ ಪೊಲೀಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಇವರಿಗೆ ವರದಿ ಮಾಡುವಂತೆ ಆದೇಶಿಸಿದೆ. ಮುಂದುವರೆದು ಆಂತರಿಕ ಜಾಗೃತ ವಿಭಾಗವು ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳ ವಿರುದ್ಧದ ದೂರುಗಳು/ಆರೋಪಗಳು/ಕುಂದುಕೊರತೆಗಳನ್ನು ಪರಿಶೀಲಿಸುವುದು ಮತ್ತು ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿದ ಆರು ತಿಂಗಳೊಳಗಾಗಿ ಸಕ್ಷಮ ಪ್ರಾಧಿಕಾರದ ಅನುಮೋದನೆಯೊಂದಿಗೆ ಇಂತಹ ದೂರುಗಳನ್ನು ವ್ಯವಹರಿಸಲು ಕಠಿಣ ಕಾರ್ಯವಿಧಾನವನ್ನು ರೂಪಿಸುವುದು.

9. ರಾಜ್ಯದಲ್ಲಿ ಜಾಗೃತ ವ್ಯವಸ್ಥೆಯ ಮೇಲುಸ್ತುವಾರಿಗಾಗಿ ಕೆಳಕಂಡ ಸದಸ್ಯರುಗಳನ್ನೊಳಗೊಂಡ ಒಂದು ಜಾಗೃತ ಸಲಹಾ ಮಂಡಳಿಯನ್ನು (Vigilance Advisory Board) ಸೃಜಿಸಲಾಗಿದೆ:–

1. ಮುಖ್ಯ ಕಾರ್ಯದರ್ಶಿ – ಮಂಡಳಿಯ ಅಧ್ಯಕ್ಷರು
2. ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ – ಸದಸ್ಯರು
3. ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ – ಸದಸ್ಯರು
4. ಪ್ರಧಾನ ಕಾರ್ಯದರ್ಶಿ, ಸಿ.ಆ.ಸು.ಇಲಾಖೆ – ಸದಸ್ಯರು
5. ಡಿ.ಜಿ. & ಐ.ಜಿ.ಪಿ. – ಸದಸ್ಯರು
6. ಆಡಳಿತ ಮತ್ತು ಸಾರ್ವಜನಿಕ ವಿಷಯಗಳಲ್ಲಿ ಅನುಭವ ಮತ್ತು ಪರಿಣಿತಿ ಹೊಂದಿರುವ ಇಬ್ಬರು ಖ್ಯಾತ ಉನ್ನತ ವ್ಯಕ್ತಿಗಳು – ಸದಸ್ಯರು
7. ಕಾರ್ಯದರ್ಶಿ, ಸಿ.ಆ.ಸು.ಇಲಾಖೆಯ ಜಾಗೃತ ವಿಭಾಗ – ಸದಸ್ಯ ಕಾರ್ಯದರ್ಶಿ

10. ಜಾಗೃತ ಸಲಹಾ ಮಂಡಳಿಯು ಕನಿಷ್ಠ ಮೂರು ತಿಂಗಳಿಗೊಮ್ಮೆ ಸಭೆ ಸೇರಿ:–

1) ಸರ್ಕಾರದಲ್ಲಿನ ಜಾಗೃತ ಕೋಶಗಳ ಕಾರ್ಯನಿರ್ವಹಣೆಯನ್ನು ಪರಿಶೀಲಿಸುವುದು;
2) ಭ್ರಷ್ಟಾಚಾರ ನಿಗ್ರಹ ದಳದ ಕಾರ್ಯದಲ್ಲಿನ ಪ್ರಗತಿಯನ್ನು ಮತ್ತು ಬಾಕಿ ಇರುವ ಪ್ರಕರಣಗಳನ್ನು ಪರಿಶೀಲಿಸುವುದು (ಜಾಗೃತ ಸಲಹಾ ಮಂಡಳಿಯ ಈ ಪರಿಶೀಲನಾ ಕಾರ್ಯವು ಕೇವಲ ಆಡಳಿತಾತ್ಮಕವಾಗಿದ್ದು, ಭ್ರಷ್ಟಾಚಾರ ತಡೆ ಅಧಿನಿಯಮದಡಿಯ ಶಾಸನಾತ್ಮಕ ತನಿಖೆಗಳ ಮೇಲ್ವಿಚಾರಣೆ ಆಗುವುದಿಲ್ಲ);
3) ಸರ್ಕಾರದಲ್ಲಿ ಬಾಕಿ ಇರುವ ಅಭಿಯೋಜನಾ ಮಂಜೂರಾತಿಗಳ ಸ್ಥಿತಿಯನ್ನು ಪರಿಶೀಲಿಸುವುದು; ಮತ್ತು
4) ರಾಜ್ಯದಲ್ಲಿ ಜಾಗೃತ ಮತ್ತು ಭ್ರಷ್ಟಾಚಾರ ನಿಗ್ರಹ ವ್ಯವಸ್ಥೆಗಳನ್ನು ಬಲಪಡಿಸಲು ಅಗತ್ಯ ಸಲಹೆ ಸೂಚನೆಗಳನ್ನು ನೀಡುವುದು.

11. ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳ ವಿರುದ್ಧ ಸ್ವೀಕೃತವಾಗುವ ದೂರುಗಳು/ ಆರೋಪಗಳು/ ಕುಂದುಕೊರತೆಗಳನ್ನು ಪರಿಶೀಲಿಸಲು ಜಾಗೃತ ಸಲಹಾ ಮಂಡಳಿಯು ಅಧಿಕಾರ ಹೊಂದಿರುತ್ತದೆ. ಮುಂದುವರೆದು, ದೂರನ್ನು ಪರಿಶೀಲಿಸಿದ ನಂತರ ಜಾಗೃತ ಸಲಹಾ ಮಂಡಳಿಯು ಭ್ರಷ್ಟಾಚಾರ ನಿಗ್ರಹ ದಳದ ಅಪರ ಪೊಲೀಸ್ ಮಹಾನಿರ್ದೇಶಕರಿಂದ ವರದಿ ಪಡೆಯುವ ಬಗ್ಗೆ ತೀರ್ಮಾನಿಸಬಹುದು ಮತ್ತು ಒಂದು ವೇಳೆ ಅಪರ ಪೊಲೀಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಇವರ ವಿರುದ್ಧ ದೂರುಗಳಿದ್ದಲ್ಲಿ, ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್‌ರವರಿಂದ ವರದಿ ಪಡೆಯುವುದು. ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್‌ರವರು ಅಪರ ಪೊಲೀಸ್ ಮಹಾನಿರ್ದೇಶಕರ ಅಭಿಪ್ರಾಯ/ವಿವರಣೆ ಪಡೆದು ಜಾಗೃತ ಸಲಹಾ ಮಂಡಳಿಗೆ ವರದಿ ಸಲ್ಲಿಸುವುದು. ಜಾಗೃತ ಸಲಹಾ ಮಂಡಳಿಯು ಭ್ರಷ್ಟಾಚಾರ ನಿಗ್ರಹ ದಳದಿಂದ ಅಥವಾ ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್‌ರವರಿಂದ ಸ್ವೀಕೃತವಾಗುವ ಅಭಿಪ್ರಾಯದೊಂದಿಗೆ ದೂರನ್ನು ಪರಿಶೀಲಿಸಿ ಮುಂದಿನ ಕ್ರಮದ ಬಗ್ಗೆ ತೀರ್ಮಾನಿಸಬಹುದು. ಜಾಗೃತ ಸಲಹಾ ಮಂಡಳಿಯು ದೂರುಗಳನ್ನು ಬಾಹ್ಯ ಸಂಸ್ಥೆಯಿಂದ ತನಿಖೆ ನಡೆಸಲು ಮೇಲ್ನೋಟಕ್ಕೆ ಸಾಕಷ್ಟು ಕಾರಣಗಳು ಇವೆ ಎಂದು ತೀರ್ಮಾನಿಸಿದಲ್ಲಿ ಇಂತಹ ವಿಷಯವನ್ನು ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆಯೊಂದಿಗೆ ಅಪರಾಧ ತನಿಖಾ ಇಲಾಖೆ (ಸಿ.ಐ.ಡಿ.) ಅಂತಹ ಸಂಸ್ಥೆಗೆ ವಹಿಸಬಹುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಎಫ್‌ಡಿ 43 ಎಫ್‌ಆರ್‌ಸಿ 2016, ದಿನಾಂಕ: 04.03.2016ರಂದು ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ ಮತ್ತು ಅವರ ಹೆಸರಿನಲ್ಲಿ,

ಎಲ್.ಕೆ. ಅತೀಕ್
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.

# ಕರ್ನಾಟಕ ಸರ್ಕಾರದ ನಡವಳಿಗಳು

(40)

ವಿಷಯ: ಕರ್ನಾಟಕ ಸರ್ಕಾರದ ಸಚಿವಾಲಯ ಹಾಗೂ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಜಾಗೃತ ಕೋಶ(Vigilance Cells)ಗಳನ್ನು ಚಾಲನೆಗೊಳಿಸುವ ಕುರಿತಂತೆ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

****

**ಓದಲಾಗಿದೆ:-**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 14 ಸೇಲೋಲಯು 2016, ದಿನಾಂಕ: 14.03.2016.

**ಪ್ರಸ್ತಾವನೆ:-**

ಮೇಲೆ ಓದಲಾದ ದಿನಾಂಕ:14.03.2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿದೆ.

ಸದರಿ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 7ರ ಉದ್ಧೃತ ಭಾಗ ಈ ಕೆಳಕಂಡಂತಿದೆ:-

> "7. ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಗಳನ್ನೊಳಗೊಂಡಂತೆ ನಿರ್ದೇಶನಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ತಮ್ಮ ಇಲಾಖೆ/ಸಂಸ್ಥೆಗಳಲ್ಲಿ ಒಂದು ಜಾಗೃತ ಕೋಶವನ್ನು ಸೃಜಿಸುವಂತೆ ಆದೇಶಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಜಾಗೃತ ವಿಭಾಗವು ಈ ಜಾಗೃತ ಕೋಶಗಳ ಕಾರ್ಯನಿರ್ವಹಣೆಯ ಮೇಲ್ವಿಚಾರಣೆಯನ್ನು ಮಾಡುವುದು ಮತ್ತು ಮುಖ್ಯಮಂತ್ರಿಯವರ ಅನುಮೋದನೆಯೊಂದಿಗೆ ಪ್ರತ್ಯೇಕವಾಗಿ ಹೊರಡಿಸಲಾಗುವ ವಿವರವಾದ ಸೂಚನೆಗಳಡಿಯಲ್ಲಿ ಜಾಗೃತ ಕಾರ್ಯವನ್ನು ಕೈಗೊಳ್ಳುವುದು."

ದಿನಾಂಕ:14.03.2016ರ ಆದೇಶದನ್ವಯ, ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ತಮ್ಮ ಇಲಾಖೆ/ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಸೃಜಿಸಬೇಕಾಗಿದ್ದು, ತತ್ಸಂಬಂಧ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016, ಬೆಂಗಳೂರು, ದಿನಾಂಕ: 22.06.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯು 2016, ದಿನಾಂಕ:14.03.2016ರ ಆದೇಶ ಭಾಗದ ಕಂಡಿಕೆ 7ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ, ಕೆಳಕಂಡ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ನೀಡಲಾಗಿದೆ:-

1. ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದು. ಈ ಜಾಗೃತ ಕೋಶಕ್ಕೆ ಮುಖ್ಯ ಜಾಗೃತ ಅಧಿಕಾರಿ(Chief Vigilance Officer)ಯು ಮುಖ್ಯಸ್ಥರಾಗಿರುತ್ತಾರೆ. ಹಾಗು ಆಯಾ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ನಂತರದ ಅಧಿಕಾರಿಯನ್ನು (officer next in seniority) ಮುಖ್ಯ ಜಾಗೃತ ಅಧಿಕಾರಿ (Chief Vigilance Officer)ಯನ್ನಾಗಿ ನೇಮಿಸತಕ್ಕದ್ದು.

2. ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳ ಕೇಂದ್ರಸ್ಥಾನದ ಕಚೇರಿಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದು. ಈ ಜಾಗೃತ ಕೋಶಕ್ಕೆ ಮುಖ್ಯ ಜಾಗೃತ ಅಧಿಕಾರಿ(Chief Vigilance Officer)ಯು ಮುಖ್ಯಸ್ಥರಾಗಿರುತ್ತಾರೆ. ಹಾಗೂ ಆಯಾ ಇಲಾಖಾ/ಸಂಸ್ಥೆಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) ಮುಖ್ಯ ಜಾಗೃತ ಅಧಿಕಾರಿ(Chief Vigilance Officer)ಯನ್ನಾಗಿ ನೇಮಿಸತಕ್ಕದ್ದು.

3. ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ವಿಭಾಗ ಮತ್ತು ಜಿಲ್ಲಾ ಮಟ್ಟದಲ್ಲಿ ಕಚೇರಿಗಳನ್ನು ಹೊಂದಿದ್ದು, ಸದರಿ ಕಚೇರಿಗಳಲ್ಲಿ ಗಣನೀಯ ಸಿಬ್ಬಂದಿ (reasonable strength) ಇದ್ದಲ್ಲಿ, ಆ ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದು. ಈ ಜಾಗೃತ ಕೋಶಕ್ಕೆ ಜಾಗೃತ ಅಧಿಕಾರಿ(Vigilance Officer)ಯು ಮುಖ್ಯಸ್ಥರಾಗಿರುತ್ತಾರೆ. ಸದರಿ ವಿಭಾಗ/ಜಿಲ್ಲಾ ಮಟ್ಟದ ಕಚೇರಿಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) ಜಾಗೃತ ಅಧಿಕಾರಿ(Vigilance Officer)ಯನ್ನಾಗಿ ನೇಮಿಸತಕ್ಕದ್ದು.

39 5

4. ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳ ಜಾಗೃತ ಅಧಿಕಾರಿಗಳು ಆಯಾ ಇಲಾಖೆ/ಸಂಸ್ಥೆಗಳ ಕೇಂದ್ರ ಕಚೇರಿಯ ಮುಖ್ಯ ಜಾಗೃತ ಅಧಿಕಾರಿಗಳಿಗೆ ವರದಿ ಮಾಡತಕ್ಕದ್ದು.

5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಆಯಾ ಜಿಲ್ಲೆಗಳ ಎಲ್ಲಾ ಇಲಾಖೆಗಳ ಸಂಬಂಧಪಟ್ಟ ಮುಖ್ಯ ಜಾಗೃತ ಅಧಿಕಾರಿಯ (Chief Vigilance Officer) ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು ತಮ್ಮ ಇಲಾಖೆಗಳ ಮುಖ್ಯ ಜಾಗೃತ ಅಧಿಕಾರಿ/ಅವರ ತತ್ಸಮಾನ ಅಧಿಕಾರಿಗಳಿಗೆ ಮುಖ್ಯ ಜಾಗೃತ ಅಧಿಕಾರಿಯಾಗಿರುತ್ತಾರೆ. ಅದೇ ರೀತಿ, ಕ್ಷೇತ್ರ ಇಲಾಖೆ ಹಾಗು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಸಂಬಂಧಪಟ್ಟ ಇಲಾಖಾ/ಸಂಸ್ಥೆಗಳ ಮುಖ್ಯಸ್ಥರು ತಮ್ಮ ಇಲಾಖೆ/ಸಂಸ್ಥೆಗಳ ಮುಖ್ಯ ಜಾಗೃತ ಅಧಿಕಾರಿ/ಅವರ ತತ್ಸಮಾನ ಅಧಿಕಾರಿಗಳಿಗೆ ಮುಖ್ಯ ಜಾಗೃತ ಅಧಿಕಾರಿಯಾಗಿರುತ್ತಾರೆ.

7. ರಾಜ್ಯ ಆಡಳಿತಶಾಹಿಯ ಮುಖ್ಯಸ್ಥರಾಗಿರುವ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ರಾಜ್ಯದ ಮುಖ್ಯ ಜಾಗೃತ ಆಯುಕ್ತರು (Chief Vigilance Commissioner) ಆಗಿರುತ್ತಾರೆ.

2. ಮುಖ್ಯ ಜಾಗೃತ ಅಧಿಕಾರಿ ಮತ್ತು ಜಾಗೃತ ಅಧಿಕಾರಿಗಳ ಕರ್ತವ್ಯಪಟ್ಟಿಯನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ
ಮತ್ತು ಅವರ ಹೆಸರಿನಲ್ಲಿ

(ಉಮಾ. ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-2).

ಇವರಿಗೆ:

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ ವಿಭಾಗ, ಬೆಂಗಳೂರು - ಇದನ್ನು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 500 ಪ್ರತಿಗಳನ್ನು ಒದಗಿಸಲು (ಮುಖಪತ್ರದೊಂದಿಗೆ)

ಪ್ರತಿಗಳು:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.-560 001.
2. ಪ್ರಧಾನ ಮಹಾಲೇಖಪಾಲರು (ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560 001.

3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು–560 001.
4. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು.
6. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ-1 ಮತ್ತು 2, ವಿಧಾನ ಸೌಧ, ಬೆಂಗಳೂರು.
7. ಎಲ್ಲಾ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
8. ರಾಜ್ಯಪಾಲರ ಜಂಟಿ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಕರ್ನಾಟಕ ವಿಧಾನ ಪರಿಷತ್ತು, ಬೆಂಗಳೂರು.
10. ಎಲ್ಲಾ ಇಲಾಖಾ ಮುಖ್ಯಸ್ಥರು.
11. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
12. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
14. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
16. ಎಲ್ಲಾ ಸರ್ಕಾರದ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ಶಾಖಾಧಿಕಾರಿಗಳು.
17. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.

(37) 31

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರದ ಸಚಿವಾಲಯವನ್ನೊಳಗೊಂಡಂತೆ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆಗಳು/ಶಾಸನಬದ್ಧ ಸಂಸ್ಥೆಗಳು/ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳಲ್ಲಿ ಸೃಜಿಸಲಾಗಿರುವ ಜಾಗೃತ ಕೋಶಗಳ (Vigilance Cells) ಮುಖ್ಯಸ್ಥರಾದ ಮುಖ್ಯ ಜಾಗೃತ ಅಧಿಕಾರಿ ಹಾಗು ಜಾಗೃತ ಅಧಿಕಾರಿಗಳ ಕರ್ತವ್ಯಗಳನ್ನು ನಿರ್ದಿಷ್ಟಪಡಿಸುವ ಕುರಿತು.

****

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯು 2016, ದಿನಾಂಕ:14.03.2016.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016, ದಿನಾಂಕ:22.06.2016.

ಪ್ರಸ್ತಾವನೆ:-

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:14.03.2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳ(Anti Corruption Bureau)ವನ್ನು ಸೃಜಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ:22.06.2016ರ ಆದೇಶದಲ್ಲಿ, ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯು 2016, ದಿನಾಂಕ:14.03.2016ರ ಆದೇಶ ಭಾಗದ ಕಂಡಿಕೆ 7ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಸದರಿ ಆದೇಶದಲ್ಲಿ ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದೆಂದೂ ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳ ನಂತರದ (officer next in seniority) ಅಧಿಕಾರಿಯನ್ನು ಸದರಿ ಜಾಗೃತ ಕೋಶದ ಮುಖ್ಯ ಜಾಗೃತ ಅಧಿಕಾರಿ (Chief Vigilance Officer)ಯನ್ನಾಗಿ ನೇಮಿಸಲು ಆದೇಶಿಸಲಾಗಿದೆ.

ಅದೇ ರೀತಿ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆಗಳು/ಶಾಸನಬದ್ಧ ಸಂಸ್ಥೆಗಳ ಕೇಂದ್ರಸ್ಥಾನದ ಕಚೇರಿಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದೆಂದೂ ಹಾಗೂ ಆಯಾ ಇಲಾಖಾ/ಶಾಸನಬದ್ಧ ಸಂಸ್ಥೆಗಳ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) ಮುಖ್ಯ ಜಾಗೃತ ಅಧಿಕಾರಿ(Chief Vigilance Officer)ಯನ್ನಾಗಿ ನೇಮಿಸಲು ಆದೇಶಿಸಲಾಗಿದೆ.

1k/7 SO(RTI) 57-A8??

ಹಾಗೂ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆಗಳು/ಶಾಸನಬದ್ಧ ಸಂಸ್ಥೆಗಳು ವಿಭಾಗ ಮತ್ತು ಜಿಲ್ಲಾ ಮಟ್ಟದಲ್ಲಿ ಕಚೇರಿಗಳನ್ನು ಹೊಂದಿದ್ದು, ಸದರಿ ಕಚೇರಿಗಳಲ್ಲಿ ಗಣನೀಯ ಸಿಬ್ಬಂದಿ (reasonable strength) ಇದ್ದಲ್ಲಿ, ಆ ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದೆಂದೂ, ಹಾಗೂ ಸದರಿ ವಿಭಾಗ/ಜಿಲ್ಲಾ ಮಟ್ಟದ ಕಚೇರಿಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) ಜಾಗೃತ ಅಧಿಕಾರಿ(Vigilance Officer)ಯನ್ನಾಗಿ ನೇಮಿಸಲು ಆದೇಶಿಸಲಾಗಿದೆ.

ಜಾಗೃತ ಕೋಶಗಳ ಮುಖ್ಯಸ್ಥರಾಗಿರುವ ಮುಖ್ಯ ಜಾಗೃತ ಅಧಿಕಾರಿ ಹಾಗೂ ಜಾಗೃತ ಅಧಿಕಾರಿಗಳ ಕರ್ತವ್ಯಗಳನ್ನು ನಿರ್ದಿಷ್ಟಪಡಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016 (ಭಾಗ-1), ಬೆಂಗಳೂರು, ದಿನಾಂಕ:06.07.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರದ ಸಚಿವಾಲಯ ವನ್ನೊಳಗೊಂಡಂತೆ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆಗಳು/ಶಾಸನಬದ್ಧ ಸಂಸ್ಥೆಗಳು/ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳಲ್ಲಿ ಸೃಜಿಸಲಾಗಿರುವ ಜಾಗೃತ ಕೋಶಗಳ (Vigilance Cells) ಮುಖ್ಯಸ್ಥರಾದ ಮುಖ್ಯ ಜಾಗೃತ ಅಧಿಕಾರಿ ಹಾಗು ಜಾಗೃತ ಅಧಿಕಾರಿಗಳ ಕರ್ತವ್ಯಗಳನ್ನು ಈ ಕೆಳಕಂಡಂತೆ ನಿರ್ದಿಷ್ಟಪಡಿಸಲಾಗಿದೆ:-

(ಅ) ಮುಂಜಾಗ್ರತಾ ಕ್ರಮಗಳಿಗೆ (Preventive Vigilance) ಸಂಬಂಧಿಸಿದಂತೆ ಮುಖ್ಯ ಜಾಗೃತ ಅಧಿಕಾರಿ ಹಾಗು ಜಾಗೃತ ಅಧಿಕಾರಿಗಳ ಕರ್ತವ್ಯಗಳು:-

(1) ಭ್ರಷ್ಟಾಚಾರ ಅಥವಾ ಅಕ್ರಮಗಳ ವ್ಯಾಪ್ತಿಯನ್ನು ತೊಡೆದುಹಾಕಲು ಅಥವಾ ಕಡಿಮೆ ಮಾಡುವ ದೃಷ್ಟಿಯಿಂದ, ಇಲಾಖೆಗಳು/ಸಂಸ್ಥೆಗಳಲ್ಲಿ ಅಸ್ತಿತ್ವದಲ್ಲಿರುವ ನಿಯಮಾವಳಿಗಳು ಹಾಗೂ ಕಾರ್ಯ ವಿಧಾನಗಳನ್ನು ವಿವರವಾಗಿ ಪರಿಶೀಲಿಸುವುದು.

(2) ವ್ಯವಸ್ಥೆಯ ವೈಫಲ್ಯಗಳು ಮತ್ತು ಭ್ರಷ್ಟಾಚಾರ ಅಥವಾ ಅಕ್ರಮಗಳ ಅಸ್ತಿತ್ವವನ್ನು ಪತ್ತೆ ಹಚ್ಚಲು ಅನಿರೀಕ್ಷಿತ ತಪಾಸಣೆ ಮತ್ತು ನಿಯಮಿತ ತಪಾಸಣೆಗಳನ್ನು ಕಾಲಕಾಲಕ್ಕೆ ಹೊರಡಿಸಲಾದ ಆಯಾ ಇಲಾಖೆಗಳ ಸುತ್ತೋಲೆಗಳನ್ವಯ ಸಂಬಂಧಪಟ್ಟ ಅಧಿಕಾರಿಗಳು ಅನುಷ್ಠಾನಗೊಳಿಸುವುದನ್ನು ಖಚಿತಪಡಿಸಿಕೊಂಡು ಈ ಬಗ್ಗೆ ಮಾಹಿತಿಯನ್ನು ಕ್ರೋಢೀಕರಿಸಿ, ಲಗತ್ತಿಸಿದ ನಮೂನೆಯಲ್ಲಿನ ಪಟ್ಟಿ-1ರಲ್ಲಿ ಸಲ್ಲಿಸುವುದು.

(ಆ) ದಂಡನಾತ್ಮಕ ಕ್ರಮಗಳಿಗೆ (Punitive Vigilance) ಸಂಬಂಧಿಸಿದಂತೆ ಮುಖ್ಯ ಜಾಗೃತ ಅಧಿಕಾರಿ ಹಾಗು ಜಾಗೃತ ಅಧಿಕಾರಿಗಳ ಕರ್ತವ್ಯಗಳು:-

(1) ಭ್ರಷ್ಟಾಚಾರ ನಿಗ್ರಹ ದಳ ಅಥವಾ ಇತರೆ ತನಿಖಾ ಸಂಸ್ಥೆಗಳು ಯಾವುದೇ ಅಧಿಕಾರಿಯ ಬಗ್ಗೆ ಮಾಹಿತಿ/ಅನುಮತಿ/ಅಭಿಪ್ರಾಯ/ಸ್ಪಷ್ಟೀಕರಣ/ದಾಖಲೆಗಳನ್ನು ಕೋರಿದಾಗ, 15 ದಿನಗಳೊಳಗೆ ಮಾಹಿತಿ ನೀಡಲು ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳುವುದು; ಒಂದು ವೇಳೆ ಮಾಹಿತಿಯನ್ನು 15 ದಿನಗಳೊಳಗೆ ನೀಡದಿದ್ದಲ್ಲಿ, ವಿಷಯವು ಸಂಬಂಧಪಟ್ಟ ಇಲಾಖಾ

ಮುಖ್ಯಸ್ಥರು/ಕಾರ್ಯದರ್ಶಿಯ ಹಂತಕ್ಕೆ ವರ್ಗಾಯಿಸಲ್ಪಡುತ್ತದೆ ಹಾಗೂ ಒಟ್ಟಾರೆ 30 ದಿನಗಳೊಳಗಾಗಿ ಮಾಹಿತಿ ನೀಡುವುದು ಕಡ್ಡಾಯವಾಗಿರುತ್ತದೆ.

(2) ಭ್ರಷ್ಟಾಚಾರ ನಿಗ್ರಹ ದಳ ಅಥವಾ ಇತರೆ ತನಿಖಾ ಸಂಸ್ಥೆಗಳು ಅಭಿಯೋಜನಾ ಮಂಜೂರಾತಿ ಕೋರಿ ಸಲ್ಲಿಸುವ ಪ್ರಸ್ತಾವನೆಗಳನ್ನು ನಿಗದಿತ ಅವಧಿಯೊಳಗೆ ವಿಲೇಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳುವುದು. ಹಾಗು ಈ ಸಂಬಂಧದ ಪ್ರಗತಿ ವರದಿಯನ್ನು ಲಗತ್ತಿಸಿದ ನಮೂನೆಯಲ್ಲಿನ ಪಟ್ಟಿ-3ರಲ್ಲಿ ಸಲ್ಲಿಸುವುದು.

(3) ಭ್ರಷ್ಟಾಚಾರ ನಿಗ್ರಹ ದಳ ಅಥವಾ ಇತರೆ ತನಿಖಾ ಸಂಸ್ಥೆಗಳು ಅಮಾನತ್ತು/ವರ್ಗಾವಣೆಗೆ ಶಿಫಾರಸ್ಸು ಮಾಡುವ ಪ್ರಕರಣಗಳಲ್ಲಿ ತುರ್ತು ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳುವುದು;

(4) ಮಾನ್ಯ ರಾಜ್ಯಪಾಲರು/ಮಾನ್ಯ ಮುಖ್ಯಮಂತ್ರಿಯವರ ಕಚೇರಿ/ಜನಸ್ಪಂದನ ವಿಭಾಗ/ ಸಾರ್ವಜನಿಕರಿಂದ ಸ್ವೀಕರಿಸಲಾದ/ಇಲಾಖೆಯಲ್ಲಿ ಸ್ವಯಂ ಪ್ರೇರಿತವಾಗಿ ದಾಖಲಿಸಲಾಗುವ ಜಾಗೃತ ವಿಷಯಗಳಿಗೆ ಸಂಬಂಧಿಸಿದ ದೂರುಗಳನ್ನು ಸ್ವೀಕರಿಸುವುದು. ಸದರಿ ದೂರುಗಳನ್ನು ಪರಿಶೀಲಿಸಿ, ದೂರುಗಳ ತೀವ್ರತೆಯನ್ನಾಧರಿಸಿ, ಭ್ರಷ್ಟಾಚಾರ ನಿಗ್ರಹ ದಳ ಅಥವಾ ಲೋಕಾಯುಕ್ತ ಸಂಸ್ಥೆ ಅಥವಾ ಇಲಾಖಾ ವಿಚಾರಣೆಗೆ ವಹಿಸುವ ಬಗ್ಗೆ ಅಥವಾ ಇನ್ನಾವುದೇ ಸೂಕ್ತ ಕ್ರಮವನ್ನು ಸಮುಚಿತ ಮಾರ್ಗದಲ್ಲಿ ತೆಗೆದುಕೊಳ್ಳುವಂತೆ ನೋಡಿಕೊಳ್ಳುವುದು. ಹಾಗು ಈ ವಿಚಾರದಲ್ಲಿ ಸಂದೇಹವಿದ್ದಲ್ಲಿ ವಿಷಯವನ್ನು ಸಂಬಂಧಪಟ್ಟ ಆಡಳಿತ ಮುಖ್ಯಸ್ಥರಿಗೆ ಸಲ್ಲಿಸುವುದು. ಸದರಿ ಪ್ರಕರಣಗಳ ಪ್ರಗತಿಯನ್ನು ಆಗಿಂದ್ದಾಗ್ಗೆ ಗಮನಿಸಿ ಲಗತ್ತಿಸಿದ ನಮೂನೆಯಲ್ಲಿನ ಪಟ್ಟಿ-2ರಲ್ಲಿ ಸಲ್ಲಿಸುವುದು. ಅಲ್ಲದೇ, ಸಾಮಾನ್ಯವಾಗಿ ಕೆಳಕಂಡ ರೀತಿಯ ಪ್ರಕರಣಗಳನ್ನು ಭ್ರಷ್ಟಾಚಾರ ನಿಗ್ರಹ ದಳಕ್ಕೆ ತನಿಖೆಗಾಗಿ ವಹಿಸಲು ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳುವುದು;

- (i) ಲಂಚ, ಭ್ರಷ್ಟಾಚಾರ, ಫೋರ್ಜರಿ, ವಂಚನೆ, ವಿಶ್ವಾಸ ವಂಚನೆ (criminal breach of trust), ಖೊಟ್ಟಿ ದಾಖಲಾತಿ ಇತ್ಯಾದಿ ಆರೋಪಗಳಿಗೆ ಸಂಬಂಧಿಸಿದ ದೂರುಗಳು;
- (ii) ಅಕ್ರಮ ಆಸ್ತಿ ಪ್ರಕರಣಗಳಿಗೆ ಸಂಬಂಧಿಸಿದ ದೂರುಗಳು;
- (iii) ತಜ್ಞ ಪೊಲೀಸ್ ತನಿಖೆಯ ಅವಶ್ಯಕತೆ ಇರುವ ಸಂಕೀರ್ಣ ಸ್ವರೂಪದ ಪ್ರಕರಣಗಳು;

(5) ಇಲಾಖಾ ವಿಚಾರಣಾ ಪ್ರಕರಣಗಳಲ್ಲಿ ವಿಚಾರಣಾಧಿಕಾರಿ ಹಾಗು ಮಂಡನಾಧಿಕಾರಿಗಳನ್ನು ಆಯಾ ಶಿಸ್ತು ಪ್ರಾಧಿಕಾರಿಗಳು ನೇಮಿಸುವಲ್ಲಿ ಯಾವುದೇ ವಿಳಂಬ ಆಗದಿರುವುದನ್ನು ಖಚಿತಪಡಿಸಿಕೊಳ್ಳುವುದು; ಹಾಗೂ ವಿಚಾರಣಾಧಿಕಾರಿಗಳ ವಿಚಾರಣಾ ವರದಿಗಳ ಮೇಲೆ ಶಿಸ್ತು ಪ್ರಾಧಿಕಾರಿಗಳು ಅಂತಿಮ ಆದೇಶಗಳನ್ನು ಸೂಕ್ತವಾದ ರೀತಿಯಲ್ಲಿ ಹಾಗು ಸಕಾಲದಲ್ಲಿ ಹೊರಡಿಸುವುದನ್ನು ಖಚಿತಪಡಿಸಿಕೊಳ್ಳುವುದು; ಇಲಾಖಾ ವಿಚಾರಣಾ ಪ್ರಕರಣಗಳ ಪ್ರಗತಿಯನ್ನು ಆಗ್ಗಿಂದ್ದಾಗ್ಗೆ ಗಮನಿಸಿ (monitor), ಈ ಬಗ್ಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಮಾಹಿತಿ ಪಡೆದು ಲಗತ್ತಿಸಿದ ನಮೂನೆಯಲ್ಲಿನ ಪಟ್ಟಿ-4ರಲ್ಲಿ ಸಲ್ಲಿಸುವುದು. ಹಾಗೂ ಇಲಾಖಾ ವಿಚಾರಣಾ ಪ್ರಕರಣಗಳಲ್ಲಿ ಅನಗತ್ಯ ವಿಳಂಬವಾಗುತ್ತಿದ್ದಲ್ಲಿ, ಇದನ್ನು ಮೇಲಧಿಕಾರಿಗಳ ಗಮನಕ್ಕೆ ತಂದು, ಸದರಿ ಪ್ರಕರಣಗಳನ್ನು ಸಕಾಲದಲ್ಲಿ ಪೂರ್ಣಗೊಳಿಸಲು ಅಗತ್ಯ ಕ್ರಮಕೈಗೊಳ್ಳುವುದು.

ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆ/ಶಾಸನಬದ್ಧ ಸಂಸ್ಥೆಗಳ ಮುಖ್ಯ ಜಾಗೃತ ಅಧಿಕಾರಿಗಳು ತಮ್ಮ ಅಧೀನ ಕಚೇರಿಗಳ ಜಾಗೃತ ಅಧಿಕಾರಿಗಳಿಂದ ದೂರುಗಳು/ಜಾಗೃತ ಪ್ರಕರಣಗಳ ವಿಲೇ ಹಾಗೂ ಬಾಕಿ ಪ್ರಕರಣಗಳ ಅಂಕಿ ಅಂಶಗಳ ವರದಿಯನ್ನು ಈ ಆದೇಶಕ್ಕೆ ಲಗತ್ತಿಸಿರುವ ನಮೂನೆಯಲ್ಲಿ ತ್ರೈಮಾಸಿಕವಾಗಿ ಪಡೆಯತಕ್ಕದ್ದು. ಹಾಗೂ ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳ ಮುಖ್ಯ ಜಾಗೃತ ಅಧಿಕಾರಿಗಳು ತಮ್ಮ ಆಡಳಿತ ವ್ಯಾಪ್ತಿಗೊಳಪಡುವ ಎಲ್ಲಾ ಕ್ಷೇತ್ರ ಇಲಾಖೆಗಳ ಮುಖ್ಯ ಜಾಗೃತ ಅಧಿಕಾರಿಗಳಿಂದ ಲಗತ್ತಿಸಿರುವ ನಮೂನೆಯಲ್ಲಿ ಮಾಹಿತಿಯನ್ನು ಪಡೆದು ಕ್ರೋಢೀಕರಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಜಾಗೃತ ವಿಭಾಗಕ್ಕೆ ತ್ರೈಮಾಸಿಕ ವರದಿಯನ್ನು ಕಳುಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ
ಮತ್ತು ಅವರ ಹೆಸರಿನಲ್ಲಿ,

(ಉಮಾ. ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಜಾಗೃತ ವಿಭಾಗ).

ಇವರಿಗೆ: .......

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ ವಿಭಾಗ, ಬೆಂಗಳೂರು – ಇದನ್ನು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 500 ಪ್ರತಿಗಳನ್ನು ಒದಗಿಸಲು (ಮುಖಪತ್ರದೊಂದಿಗೆ)

ಪ್ರತಿಗಳು:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ5398, ಬೆಂಗಳೂರು.–560 001.
2. ಪ್ರಧಾನ ಮಹಾಲೇಖಪಾಲರು (ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ5398, ಬೆಂಗಳೂರು–560 001.
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು–560 001.
4. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು.
6. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ–1/2.
7. ಎಲ್ಲಾ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
8. ಅಪರ ಪೊಲೀಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಖನಿಜ ಭವನ, ಬೆಂಗಳೂರು.
9. ರಾಜ್ಯಪಾಲರ ಜಂಟಿ ಕಾರ್ಯದರ್ಶಿ, ರಾಜಭವನ, ಬೆಂಗಳೂರು.

97

33

10. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಕರ್ನಾಟಕ ವಿಧಾನ ಪರಿಷತ್ತು, ಬೆಂಗಳೂರು.
11. ಎಲ್ಲಾ ಇಲಾಖಾ ಮುಖ್ಯಸ್ಥರು.
12. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
13. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
14. ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
15. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
16. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
17. ಎಲ್ಲಾ ಸರ್ಕಾರದ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ಶಾಖಾಧಿಕಾರಿಗಳು.
18. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.

# ಮುಖ್ಯ ಜಾಗೃತಾ ಅಧಿಕಾರಿಗಳು ಹಾಗೂ ಜಾಗೃತ ಅಧಿಕಾರಿಗಳು ಸಲ್ಲಿಸಬೇಕಾದ ತ್ರೈಮಾಸಿಕ ವರದಿ

## ಪ್ರಪತ್ರ

### ಅ. ಮುಂಜಾಗ್ರತಾ ಕ್ರಮಗಳು (Preventive Vigilance)

1. ಮುಖ್ಯ ಜಾಗೃತ ಅಧಿಕಾರಿ/ಜಾಗೃತ ಅಧಿಕಾರಿಗಳು ಕೈಗೊಳ್ಳಬೇಕಾದ ತನಿಖೆ/ತಪಾಸಣೆಗಳ ವಿವರ

| ತನಿಖೆಯ ರೀತಿ | ಕಳೆದ ತ್ರೈಮಾಸಿಕದ ಅಂತ್ಯಕ್ಕೆ ಮಾಡಿದ ತನಿಖೆಗಳು | ಪ್ರಸ್ತುತ ತ್ರೈಮಾಸಿಕದಲ್ಲಿ ಮಾಡಿದ ತನಿಖೆಗಳು | ಷರಾ |
|---|---|---|---|
| ಕಾಲಕಾಲಕ್ಕೆ | | | |
| ಅನಿರೀಕ್ಷಿತ ತಪಾಸಣೆಗಳು | | | |
| ಮೇಜರ್ ವರ್ಕ್ಸ್ | | | |
| ಒಟ್ಟು | | | |

### (ಆ) ದಂಡನಾತ್ಮಕ ಕ್ರಮಗಳು (Punitive Vigilance)

2. ಸ್ವೀಕರಿಸಿದ ದೂರುಗಳು

| ಸ್ವೀಕರಿಸಿದ ಮೂಲ | ಆರಂಭಿಕ ಬಾಕಿ | ಪ್ರಸ್ತುತ ಅವಧಿಯಲ್ಲಿ ಸ್ವೀಕರಿಸಿದ ದೂರುಗಳು | ಒಟ್ಟು | ಪ್ರಸ್ತುತ ಅವಧಿಯಲ್ಲಿ ವಿಲೇ ಮಾಡಿದ ದೂರುಗಳು | ಬಾಕಿಯಿರುವ ದೂರುಗಳು | ಬಾಕಿ ದೂರುಗಳು | | |
|---|---|---|---|---|---|---|---|---|
| | | | | | | 1ರಿಂದ 6 ತಿಂಗಳು | 6ರಿಂದ 12 ತಿಂಗಳು | 12 ತಿಂಗಳಿಗಿಂತ ಮೇಲ್ಪಟ್ಟು |
| (1) | (2) | (3) | (4) (2+3=4) | (5) | (6) (4-5=6) | (7) | (8) | (9) |
| ಮಾನ್ಯ ರಾಜ್ಯಪಾಲರ ಕಚೇರಿ | | | | | | | | |
| ಮಾನ್ಯ ಮುಖ್ಯ ಮಂತ್ರಿಯವರ ಕಚೇರಿ | | | | | | | | |
| ಜನಸ್ಪಂದನ ವಿಭಾಗ | | | | | | | | |
| ಸ್ವಯಂ ಪ್ರೇರಿತ | | | | | | | | |
| ಇತರ | | | | | | | | |
| ಒಟ್ಟು | | | | | | | | |

3. ಅಭಿಯೋಜನಾ ಮಂಜೂರಾತಿಗಳು

| ಆರಂಭಿಕ ಬಾಕಿ | ಪ್ರಸ್ತುತ ಅವಧಿಯಲ್ಲಿ ಸ್ವೀಕರಿಸಿದವು | ಒಟ್ಟು | ಪ್ರಸ್ತುತ ಅವಧಿಯಲ್ಲಿ ವಿಲೇ ಮಾಡಿದವು | | | ಬಾಕಿಯಿರುವ ಪ್ರಸ್ತಾವನೆಗಳು | ಬಾಕಿ ಪ್ರಕರಣಗಳು | | |
|---|---|---|---|---|---|---|---|---|---|
| | | | ಮಂಜೂರಾತಿ ನೀಡಿದ ಪ್ರಕರಣಗಳು | ತಿರಸ್ಕರಿಸಿದ ಪ್ರಕರಣಗಳು | ಒಟ್ಟು | | 1ರಿಂದ 6 ತಿಂಗಳು | 6ರಿಂದ 12 ತಿಂಗಳು | 12 ತಿಂಗಳಿಗಿಂತ ಮೇಲ್ಪಟ್ಟು |
| (1) | (2) | (3) | (4) | (5) | (6) | (7) (3-6=7) | (8) | (9) | (10) |
| | | | | | | | | | |

4. ಇಲಾಖಾ ವಿಚಾರಣೆಗಳು

(ಅ) ಲೋಕಾಯುಕ್ತಕ್ಕೆ ವಹಿಸಿದ ಪ್ರಕರಣಗಳು

| ಆರಂಭಿಕ ಬಾಕಿ | ಪ್ರಸ್ತುತ ಅವಧಿಯಲ್ಲಿ ವಹಿಸಿದ ಪ್ರಕರಣಗಳು | ಒಟ್ಟು ಪ್ರಕರಣಗಳು | ಪ್ರಸ್ತುತ ಅವಧಿಯಲ್ಲಿ ಲೋಕಾಯುಕ್ತದಿಂದ ಅಂತಿಮ ವರದಿ ಸ್ವೀಕೃತವಾದ ಪ್ರಕರಣಗಳು | ಪ್ರಸ್ತುತ ಅವಧಿಯಲ್ಲಿ ಶಿಸ್ತು ಪ್ರಾಧಿಕಾರದಿಂದ ಅಂತಿಮ ಆದೇಶ ಹೊರಡಿಸಿದ ಪ್ರಕರಣಗಳು | ಬಾಕಿಯಿರುವ ಪ್ರಕರಣಗಳು | ಬಾಕಿ ಪ್ರಕರಣಗಳು | | |
|---|---|---|---|---|---|---|---|---|
| (1) | (2) | (3) | (4) | (5) | (6) 3-5=6 | (7) | (8) | (9) |
| | | | | | | 1ರಿಂದ 6 ತಿಂಗಳು | 6ರಿಂದ 12 ತಿಂಗಳು | 12 ತಿಂಗಳಿಗಿಂತ ಮೇಲ್ಪಟ್ಟು |
| | | | | | | | | |

(ಆ) ಆಂತರಿಕವಾಗಿ ಇಲಾಖಾ ವಿಚಾರಣೆಗೆ ವಹಿಸಿದ ಪ್ರಕರಣಗಳ ವಿವರ

| ಆರಂಭಿಕ ಬಾಕಿ | ಪ್ರಸ್ತುತ ಅವಧಿಯಲ್ಲಿ ಇಲಾಖಾ ವಿಚಾರಣೆಗೆ ವಹಿಸಿದ ಪ್ರಕರಣಗಳು | ಒಟ್ಟು ಪ್ರಕರಣಗಳು | ಪ್ರಸ್ತುತ ಅವಧಿಯಲ್ಲಿ ವಿಚಾರಣಾಧಿಕಾರಿಯಿಂದ ಅಂತಿಮ ವರದಿ ಸ್ವೀಕೃತವಾದ ಪ್ರಕರಣಗಳು | ಪ್ರಸ್ತುತ ಅವಧಿಯಲ್ಲಿ ಶಿಸ್ತು ಪ್ರಾಧಿಕಾರದಿಂದ ಅಂತಿಮ ಆದೇಶ ಹೊರಡಿಸಿದ ಪ್ರಕರಣಗಳು | ಬಾಕಿಯಿರುವ ಪ್ರಕರಣಗಳು | ಬಾಕಿ ಪ್ರಕರಣಗಳು | | |
|---|---|---|---|---|---|---|---|---|
| (1) | (2) | (3) | (4) | (5) | (6) 3-5=6 | (7) | (8) | (9) |
| | | | | | | 1ರಿಂದ 6 ತಿಂಗಳು | 6ರಿಂದ 12 ತಿಂಗಳು | 12 ತಿಂಗಳಿಗಿಂತ ಮೇಲ್ಪಟ್ಟು |
| | | | | | | | | |

ಸ್ಥಳ:

ಮುಖ್ಯ ಜಾಗೃತಾ ಅಧಿಕಾರಿ/ಜಾಗೃತ ಅಧಿಕಾರಿ ಸಹಿ

ದಿನಾಂಕ:

ಹೆಸರು

(29)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರದ ಇಂಧನ ಇಲಾಖೆಯ ಸಚಿವಾಲಯದಲ್ಲಿ ಮುಖ್ಯ ಜಾಗೃತ ಅಧಿಕಾರಿ (Chief Vigilance Officer) ಅನ್ನು ನೇಮಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 14 ಸೇಲೋಯು 2016 ದಿ:14.03.2016.
2) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 88 ಸೇಲೋಯು 2016 ದಿ:22.06.2016.

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿ : 14.03.2016 ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988 ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruprion Bureau) ಸೃಜಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ದಿ :22.06.2016 ರ ಆದೇಶದಲ್ಲಿ ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ದಿ :14.03.2016 ರ ಸರ್ಕಾರದ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 7 ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗೂ ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ದಿನಾಂಕ :22.06.2016 ರ ಆದೇಶದ ಆದೇಶ ಭಾಗದ ಕಂಡಿಕೆ 1(1) ರಲ್ಲಿ ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದೆಂದೂ ಹಾಗೂ ಆಯಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳ ನಂತರದ (Officer next in seniority) ಅಧಿಕಾರಿಯನ್ನು ಸದರಿ ಜಾಗೃತ ಕೋಶದ ಮುಖ್ಯ ಜಾಗೃತ ಅಧಿಕಾರಿ (Chief Vigilance Officer) ಯನ್ನಾಗಿ ನೇಮಿಸಲು ಆದೇಶಿಸಲಾಗಿರುತ್ತದೆ.

ಅದರಂತೆ, ಪರಿಶೀಲಿಸಿ, ಇಂಧನ ಇಲಾಖೆಗೆ ಸಂಬಂಧಿಸಿದಂತೆ ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 69 ಇಇಬಿ 2016.**
**ಬೆಂಗಳೂರು, ದಿನಾಂಕ: 29.06.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರದ ಸಚಿವಾಲಯದ ಇಂಧನ ಇಲಾಖೆಗೆ ಸಂಬಂಧಿಸಿದಂತೆ, ಸರ್ಕಾರದ ಉಪ ಕಾರ್ಯದರ್ಶಿ, ಇಂಧನ ಇಲಾಖೆ ಇವರನ್ನು ಮುಖ್ಯ ಜಾಗೃತ ಅಧಿಕಾರಿ (Chief Vigilance Officer) ಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ವಿ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

29.06

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು - 560001.
2. ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸು ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸು ಇಲಾಖೆ (ಆಡಳಿತ ಸುಧಾರಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸು ಇಲಾಖೆ (ಜಾಗೃತ ವಿಭಾಗ), ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸು ಇಲಾಖೆ (ಸೇವಾ ನಿಯಮಗಳು-2), ವಿಧಾನ ಸೌಧ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
8. ವ್ಯವಸ್ಥಾಪಕ ನಿರ್ದೇಶಕರು,ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಕೆ. ಜಿ. ರಸ್ತೆ, ಬೆಂಗಳೂರು-560 009.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, 39, ಸ್ಕೌಟ್ಸ್ ಮತ್ತು ಗೈಡ್ ಬಿಲ್ಡಿಂಗ್, ಪ್ಯಾಲೇಸ್ ರಸ್ತೆ, ಬೆಂಗಳೂರು-560 001.
10. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕಾರ್ಪೋರೇಟ್ ಕಚೇರಿ, ಕೆ.ಆರ್. ವೃತ್ತ, ಬೆಂಗಳೂರು-560 001.
11. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕಾರ್ಪೋರೇಟ್ ಕಛೇರಿ, ಅಂಚೆ ಪೆಟ್ಟಿಗೆ ಸಂಖ್ಯೆ: 200, ಪ್ಯಾರಾಡಿಂ ಪ್ಲಾಜಾ, ಎ. ಬಿ. ಶೆಟ್ಟಿ ವೃತ್ತ, ಮಂಗಳೂರು-575 001.
12. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೋರೇಟ್ ಕಛೇರಿ, ನವನಗರ, ಹುಬ್ಬಳ್ಳಿ-580 025.
13. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೋರೇಟ್ ಕಛೇರಿ, ಸ್ಟೇಷನ್ ರಸ್ತೆ, ಪರಿವಾರ್ ಹೋಟೆಲ್ ಎದುರುಗಡೆ, ಗುಲ್ಬರ್ಗಾ-585 102.
14. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಕಾರ್ಪೋರೇಟ್ ಕಛೇರಿ, ನಂ: 927, ಎಲ್.ಜೆ. ಅವಿನ್ಯು ಕಮರ್ಷಿಯಲ್ ಕಾಂಪ್ಲೆಕ್ಸ್, ನ್ಯೂ ಕಾಂತರಾಜ್ ಅರಸ್ ರಸ್ತೆ, ಸರಸ್ವತಿಪುರಂ, ಮೈಸೂರು-570 009.
15. ವ್ಯವಸ್ಥಾಪಕ ನಿರ್ದೇಶಕರು, ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ಕೆ.ಪಿ.ಟಿ.ಸಿ.ಎಲ್. ಕಟ್ಟಡ, ಕಾವೇರಿ ಭವನ, ಬೆಂಗಳೂರು-560 009.
16. ಕಾರ್ಯದರ್ಶಿ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ, 6 ಮತ್ತು 7ನೇ ಮಹಡಿ, ಮಹಾಲಕ್ಷ್ಮಿ ಛೇಂಬರ್ಸ್, 9/2, ಎಂ.ಜಿ. ರಸ್ತೆ, ಬೆಂಗಳೂರು-1.
17. ಮುಖ್ಯ ವಿದ್ಯುತ್ ಪರಿವೀಕ್ಷಕರು, ವಿದ್ಯುತ್ ಪರಿವೀಕ್ಷಣಾ ಇಲಾಖೆ, ನಂ:32/1 ಮತ್ತು 2, ಎರಡನೇ ಮಹಡಿ, ಕ್ರೆಸೆಂಟ್ ಟವರ್ಸ್, ಕ್ರೆಸೆಂಟ್ ರಸ್ತೆ, ಬೆಂಗಳೂರು-560 001.
18. ಮುಖ್ಯ ಕಾರ್ಯನಿರ್ವಾಹಕ ಅಭಿಯಂತರರು, ಇಎಂಸಿ-1/ ಇಎಂಸಿ-2, ಇಂಧನ ಇಲಾಖೆ ವಿಕಾಸ ಸೌಧ, ಬೆಂಗಳೂರು.
19. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
20. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು.
21. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು.
22. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು.
23. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

(27)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರದ ಇಂಧನ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಪರಿವೀಕ್ಷಣಾಲಯ /ನಿಗಮಗಳು/ಕಂಪನಿಗಳು/ಮಂಡಳಿಗಳ ಕೇಂದ್ರ ಸ್ಥಾನದ ಕಚೇರಿಗಳಿಗೆ ಸಂಬಂಧಿಸಿದಂತೆ ಮುಖ್ಯ ಜಾಗೃತ ಅಧಿಕಾರಿ (Chief Vigilance Officers)ಗಳನ್ನು ನೇಮಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 14 ಸೇಲೋಯ 2016 ದಿ:14.03.2016.

2) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 88 ಸೇಲೋಯ 2016 ದಿ:22.06.2016.

3) ಸರ್ಕಾರದ ಪತ್ರ ಸಂಖ್ಯೆ : ಇಎನ್ 69 ಇಇಬಿ 2016, ದಿನಾಂಕ :04.08.2016.

4) ಮುಖ್ಯ ವಿದ್ಯುತ್ ಪರಿವೀಕ್ಷಕರು, ವಿದ್ಯುತ್ ಪರಿವೀಕ್ಷಣಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ :ಮುವಿಪ/ಸಿಸ2/22827/2016-17, ದಿನಾಂಕ :08.09.2016.

5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ :ಎಂಪಿಎಬಿ/2726, ದಿನಾಂಕ :08.09.2016.

6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ :ಕವಿಪ್ರನಿನಿ/ಬಿಎಎ/38281/2016-17, ದಿನಾಂಕ :25.08.2016.

7) ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ : ಬೆವಿಕಂ/ಬಿಸಿ31/11/2016-17/420, ದಿನಾಂಕ : 30.08.2016.

8) ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ), ಮಂಗಳೂರು ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಯಮಿತ, ಮಂಗಳೂರು ಇವರ ಪತ್ರ ಸಂಖ್ಯೆ : ಪ್ರವ್ಯ(ಆ)/ಸ.ಪ್ರ.ವ್ಯ(ಆ)/ಲೆ(ಆ)/16-17/7317-21, ದಿನಾಂಕ : 02.09.2016.

9) ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ), ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ ಇವರ ಪತ್ರ ಸಂಖ್ಯೆ : ಹುವಿಸಕಂನಿ/ಪ್ರವ್ಯ(ಆ)/ಲೆ(ಆ)/ಸಲೆ(ಆ)/ಅ-2/ಕಾರಕ-893(148631)/2016-17/12446-47, ದಿನಾಂಕ : 07.09.2016.

10) ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ), ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಕಲಬುರಗಿ ಇವರ ಪತ್ರ ಸಂಖ್ಯೆ:ಗುವಿಸಕಂನಿ/ಪ್ರವ್ಯ/ಲೆ(ಸಿ)/2016-17/28639-40 ದಿನಾಂಕ : 07.09.2016.

11) ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ), ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು ಇವರ ಪತ್ರ ಸಂಖ್ಯೆ :ಪ್ರವ್ಯ(ಆ&ಮಾಸಂ)/ಉಪ್ರವ್ಯ/ವ್ಯ(ಆ&ಮಾಸಂ)/ಸ1/ಕ-759/2016-17/10010 ದಿನಾಂಕ : 30.08.2016.

12) ವ್ಯವಸ್ಥಾಪಕ ನಿರ್ದೇಶಕರು, ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ಬೆಂಗಳೂರು ಇವರ ಪತ್ರ ಸಂಖ್ಯೆ :ಪಿಸಿಕೆಎಲ್/ಅನಿ(ಯೋ)/ಸಿವಿಲ್/2016-17/2663, ದಿ:24.08.2016.

13) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು, ಇವರ ಪತ್ರ ಸಂಖ್ಯೆ : ಕೆ.ಆರ್.ಇ.ಡಿ.ಎಲ್/01-323/ ಆಡಳಿತ/2016/2869, ದಿನಾಂಕ :19.08.2016.

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988 ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruprion Bureau) ಸೃಜಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ದಿ :14.03.2016 ರ ಸರ್ಕಾರದ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 7 ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ / ಆಯುಕ್ತಾಲಯ, ಕ್ಷೇತ್ರ ಇಲಾಖೆ,

---2}

